# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ –253 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ:09–05–2025 ಶುಕ್ರವಾರ | ಪುಟ: 4 | ಬೆಲೆ : ರೂ.2–00
Volume - 02 Issue - 253 | RNI No: KARKAN/2023/88462 | KA/SK/CTA-874/2024-2026 | Chitradurga | Date: 09-05-2025 Friday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಡಾ.ಅಂಬೇಡ್ಕರ್ ಮತ್ತು ಬಾಬುಜೀ ನೀಡಿದ ಕೊಡುಗೆ ಯಾರೂ ಮರೆಯಲು ಸಾಧ್ಯವಿಲ್ಲ 2

ಮನದ ಮಲೀನ ತೊಳೆದು, ಸೌಹಾರ್ದತೆಯಿಂದ ಬಾಳಿ 3

ಹೊಸದುರ್ಗ ಪಟ್ಟಣದಲ್ಲಿ ಶಿಕ್ಷಕರಿಗೆ ಶಾಸಕ ಬಿ.ಜಿ.ಗೋವಿಂದಪ್ಪ ತರಾಟೆ 4



ಸುದ್ದಿ, ಜಾಹಿರಾತಿಗೆ
9686622252


## ಫಾಸ್ಟ್ ನ್ಯೂಸ್

### ಗ್ರಾಮ ಪಂಚಾಯಿತಿ ಉಪ ಚುನಾವಣೆ: ವೇಳಾಪಟ್ಟಿ ಪ್ರಕಟ



» **ಚಿತ್ರದುರ್ಗ**

ರಾಜ್ಯ ಚುನಾವಣಾ ಆಯೋಗವು ಚಿತ್ರದುರ್ಗ ಜಿಲ್ಲೆಯ ಗ್ರಾಮ ಪಂಚಾಯಿತಿಗಳಲ್ಲಿ ವಿವಿಧ ಕಾರಣಗಳಿಂದ ತೆರವಾದ ಖಾಲಿ ಸದಸ್ಯ ಸ್ಥಾನಗಳಿಗೆ ಉಪಚುನಾವಣೆ ನಡೆಸಲು ವೇಳಾಪಟ್ಟಿ ಪ್ರಕಟಿಸಲಾಗಿದೆ. ಚುನಾವಣಾ ವೇಳಾಪಟ್ಟಿ ವಿವರ ಇಂತಿದೆ. ಮೇ 08 ರಿಂದ 28 ರವರೆಗೆ ಚುನಾವಣೆ ನಡೆಯುವ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಚುನಾವಣಾ ನೀತಿ ಸಂಹಿತೆ ಜಾರಿಯಲ್ಲಿರಲಿದೆ. ಮೇ.08ರಂದು ಚುನಾವಣಾ ಅಧಿಸೂಚನೆ ಹೊರಡಿಸಲಾಗುವುದು. ಮೇ.14 ನಾಮಪತ್ರಗಳನ್ನು ಸಲ್ಲಿಸಲು ಕೊನೆಯ ದಿನವಾಗಿದೆ. ಮೇ.15ರಂದು ನಾಮಪತ್ರಗಳ ಪರಿಶೀಲನೆ, ಮೇ.17 ಉಮೇದುವಾರಿಕೆ ಹಿಂತೆಗೆದುಕೊಳ್ಳಲು ಕೊನೆಯ ದಿನವಾಗಿದೆ. ಮತದಾನ ಅವಶ್ಯವಿದ್ದರೆ ಮೇ.25ರಂದು ಬೆಳಿಗ್ಗೆ 7 ರಿಂದ ಸಂಜೆ 5 ರವರೆಗೆ ಮತದಾನ ನಡೆಸಲಾಗುವುದು. ಮರು ಮತದಾನದ ಅವಶ್ಯಕತೆ ಇದ್ದರೆ ಮೇ.27ರಂದು ಬೆಳಿಗ್ಗೆ 7 ರಿಂದ ಸಂಜೆ 5 ರವರೆಗೆ ಮತದಾನ ನಡೆಸಲಾಗುವುದು. ಮೇ.28ರಂದು ಬೆಳಿಗ್ಗೆ 8 ಗಂಟೆಯಿಂದ ತಾಲ್ಲೂಕು ಕೇಂದ್ರಗಳಲ್ಲಿ ಮತ ಎಣಿಕೆ ನಡೆಯುವುದು. ಮೇ.28ರಂದು ಚುನಾವಣಾ ಪ್ರಕ್ರಿಯೆ ಪೂರ್ಣಗೊಳ್ಳಲಿದೆ ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದ್ದಾರೆ.

### ಮೇ.10ರಂದು ಶಿವಶರಣೆ ಮಹಾಸಾಧ್ವಿ ಹೇಮರೆಡ್ಡಿ ಮಲ್ಲಮ್ಮ ಜಯಂತಿ

» **ಚಿತ್ರದುರ್ಗ**

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ಚಿತ್ರದುರ್ಗ ಇವರ ಸಂಯುಕ್ತಾಶ್ರಯದಲ್ಲಿ ಶಿವಶರಣೆ ಮಹಾಸಾಧ್ವಿ ಹೇಮರೆಡ್ಡಿ ಮಲ್ಲಮ್ಮ ಜಯಂತಿ ಆಚರಣೆ ಸಮಾರಂಭ ಇದೇ ಮೇ.10ರಂದು ಬೆಳಿಗ್ಗೆ 11 ಗಂಟೆಗೆ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಆಯೋಜಿಸಲಾಗಿದೆ. ಯೋಜನಾ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ. ಸುಧಾಕರ್ ಕಾರ್ಯಕ್ರಮದ ಉದ್ಘಾಟನೆ ನೆರವೇರಿಸುವರು. ಚಿತ್ರದುರ್ಗ ಶಾಸಕ ಕೆ.ಸಿ. ವೀರೇಂದ್ರ ಪಪ್ಪಿ ಅಧ್ಯಕ್ಷತೆ ವಹಿಸುವರು. ಗೌರವಾನ್ವಿತ ಅತಿಥಿಗಳಾಗಿ ಸಂಸದ ಗೋವಿಂದ ಎಂ. ಕಾರಜೋಳ, ಹೊಸದುರ್ಗ ಶಾಸಕರು ಹಾಗೂ ಆಹಾರ ಮತ್ತು ನಾಗರಿಕ ಸರಬರಾಜು ನಿಗಮದ ಅಧ್ಯಕ್ಷ ಬಿ.ಜಿ. ಗೋವಿಂದಪ್ಪ, ಚಳ್ಳಕೆರೆ ಶಾಸಕರು ಹಾಗೂ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದ ಅಧ್ಯಕ್ಷ ಟಿ. ರಘುಮೂರ್ತಿ, ಮೊಳಕಾಲ್ಮೂರು ಶಾಸಕ ಎನ್.ವೈ. ಗೋಪಾಲಕೃಷ್ಣ, ಹೊಳಲ್ಕೆರೆ ಶಾಸಕ ಡಾ. ಎಂ. ಚಂದ್ರಪ್ಪ, ವಿಧಾನಪರಿಷತ್ ಸದಸ್ಯರುಗಳಾದ ಚಿದಾನಂದ ಎಂ. ಗೌಡ, ಕೆ.ಎಸ್. ನವೀನ್, ಡಿ.ಟಿ. ಶ್ರೀನಿವಾಸ್ ಭಾಗವಹಿಸುವರು. ಮುಖ್ಯ ಅತಿಥಿಗಳಾಗಿ ಕರ್ನಾಟಕ ದ್ರಾಕ್ಷಾರಸ ಮಂಡಳಿ ಅಧ್ಯಕ್ಷ ಡಾ. ಬಿ. ಯೋಗೇಶ್ ಬಾಬು, ಕರ್ನಾಟಕ ಆದಿ ಜಾಂಬವ ಅಭಿವೃದ್ಧಿ ನಿಗಮದ ಅಧ್ಯಕ್ಷ ಜಿ.ಎಸ್. ಮಂಜುನಾಥ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎಂ.ಕೆ. ತಾಜ್‌ಪೀರ್, ನಗರಸಭೆ ಅಧ್ಯಕ್ಷೆ ಸುಮಿತಾ ರಾಘವೇಂದ್ರ, ಜಿಲ್ಲಾ ಗ್ಯಾರಂಟಿ ಯೋಜನಾ ಪ್ರಾಧಿಕಾರ ಅಧ್ಯಕ್ಷ ಆರ್.ಶಿವಣ್ಣ, ಚಿತ್ರದುರ್ಗ ಜಿಲ್ಲಾ ವೀರಶೈವ–ಲಿಂಗಾಯತ ಹೇಮರೆಡ್ಡಿ ಮಲ್ಲಮ್ಮ ಸಮಾಜ ಅಧ್ಯಕ್ಷ ಜಿ.ಚಿದಾನಂದಪ್ಪ, ಪ್ರಧಾನ ಕಾರ್ಯದರ್ಶಿ ಡಿ.ಟಿ.ಶಿವಾನಂದಪ್ಪ ಸೇರಿದಂತೆ ಜಿಲ್ಲೆಯ ಸಮಸ್ತ ಗೌರವಾನ್ವಿತ ಜನಪ್ರತಿನಿಧಿಗಳು, ಚುನಾಯಿತ ನಗರಸಭಾ ಸದಸ್ಯರು ಹಾಗೂ ಜಿಲ್ಲೆಯ ವೀರಶೈವ–ಲಿಂಗಾಯತ ಹೇಮರೆಡ್ಡಿ ಮಲ್ಲಮ್ಮ ಸಮಾಜದ ಮುಖಂಡರು, ಗಣ್ಯರು ಪಾಲ್ಗೊಳ್ಳುವರು. ಚಳ್ಳಕೆರೆ ಬಾಪೂಜಿ ಪ್ರಥಮ ದರ್ಜೆ ಕಾಲೇಜು ಕನ್ನಡ ವಿಭಾಗ ಸಹಾಯಕ ಪ್ರಾಧ್ಯಾಪಕ ಡಾ.ಜಿ.ವಿ.ರಾಜಣ್ಣ ಉಪನ್ಯಾಸ ನೀಡುವರು. ಚಿತ್ರದುರ್ಗದ ಕೆಪಿಎಂ ಗಣೇಶಯ್ಯ ಮತ್ತು ತಂಡದವರಿಂದ ಗೀತಗಾಯನ ನಡೆಯಲಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ. ಬಿ.ಎಂ. ಗುರುನಾಥ ತಿಳಿಸಿದ್ದಾರೆ.

### ಅಂಗವಿಕಲ ವ್ಯಕ್ತಿಗಳ ಹಕ್ಕು ಅಧಿನಿಯಮ ರಾಜ್ಯ ಆಯುಕ್ತ ದಾಸ್ ಸೂರ್ಯವಂಶಿ ಹೇಳಿಕೆ

# ಪ್ರಸಕ್ತ ವರ್ಷದಲ್ಲಿಯೇ ಅಂಗವಿಕಲರ ಜನಗಣತಿ



» **ಚಿತ್ರದುರ್ಗ**

ಪ್ರಸಕ್ತ ವರ್ಷದಲ್ಲಿಯೇ ಅಂಗವಿಕಲರ ಜನಗಣತಿ ಕಾರ್ಯ ಕೈಗೊಳ್ಳಲಾಗುವುದು ಎಂದು ಅಂಗವಿಕಲ ವ್ಯಕ್ತಿಗಳ ಹಕ್ಕು ಅಧಿನಿಯಮ ಅನುಷ್ಠಾನದ ರಾಜ್ಯ ಆಯುಕ್ತ ದಾಸ್ ಸೂರ್ಯವಂಶಿ ಹೇಳಿದರು.

ನಗರದ ಜಿಲ್ಲಾ ಬಾಲಭವನ ಸಭಾಂಗಣದಲ್ಲಿ ಬುಧವಾರ ಜಿಲ್ಲೆಯ ವಿಆರ್‌ಡಬ್ಲ್ಯೂ, ಎಂಆರ್‌ಡಬ್ಲ್ಯೂಗಳ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ದೇಶದಲ್ಲಿಯೇ ಪ್ರಪ್ರಥಮ ಬಾರಿಗೆ ರಾಜ್ಯದಲ್ಲಿ ಅಂಗವಿಕಲರ ಜನಗಣತಿ ನಡೆಸಲು ನಿರ್ಧರಿಸಲಾಗಿದೆ. ಅಂಗವಿಕಲರ ಜನಗಣತಿ ಸಂಬಂಧ ಸುಮಾರು ಒಂಭತ್ತು ತಿಂಗಳಿಂದ ಮುಖ್ಯಮಂತ್ರಿಗಳು, ಮುಖ್ಯ ಕಾರ್ಯದರ್ಶಿಗಳಿಗೆ ಪತ್ರ ಬರೆದಿದ್ದು, ಅಂಗವಿಕಲರ ಸಬಲೀಕರಣ, ಸುಧಾರಣೆಗಾಗಿ ಅಂಗವಿಕಲರ ಜನಗಣತಿಯಿಂದ ನಿಖರ ಮಾಹಿತಿ ಲಭ್ಯವಾಗಲಿದೆ ಎಂದು ತಿಳಿಸಿದ ಅವರು, ಮುಖ್ಯಮಂತ್ರಿಗಳು ಈ ಬಾರಿಯ ಬಜೆಟ್‌ನಲ್ಲಿ ಅಂಗವಿಕಲರ ಸಮೀಕ್ಷೆ ಕೈಗೊಳ್ಳಲಾಗುವುದು ಎಂದು ಘೋಷಿಸಿದ್ದು, ಪ್ರಸಕ್ತ ವರ್ಷದಲ್ಲಿಯೇ ಅಂಗವಿಕಲರ ಜನಗಣತಿ ಕಾರ್ಯಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಅಂಗವಿಕಲರ ಜನಗಣತಿ ಕಾರ್ಯ ಸಂಬಂಧ ವಿಆರ್‌ಡಬ್ಲ್ಯೂ, ಎಂ.ಆರ್.ಡಬ್ಲ್ಯೂಗಳಿಗೆ ತರಬೇತಿ ನೀಡಲಾಗುವುದು.ಎಷ್ಟುಜನಅಂಗವಿಕಲರು ಯುಡಿಐಡಿ ಕಾರ್ಡ್ ಪಡೆದಿದ್ದಾರೆ, ಇನ್ನೂ ಎಷ್ಟು ಯುಡಿಐಡಿ ಕಾರ್ಡ್ ಬಾಕಿ ಇದೆ, ಅಂಗವಿಕಲರ ಮಾಸಾಶನ ಎಷ್ಟು ಜನರಿಗೆ ತಲುಪುತ್ತಿದೆ ಎಂಬುವುದು ಸೇರಿದಂತೆ ಎಲ್ಲ ಮಾಹಿತಿಯನ್ನೂ ಸಹ ಮನೆ ಮನೆಗೆ ಭೇಟಿ ನೀಡಿ ದಾಖಲಿಸಲಾಗುವುದು ಎಂದು ಹೇಳಿದರು.

ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಕನಿಷ್ಟ ಎರಡು ಅಂಗವಿಕಲರ ಸ್ವ–ಸಹಾಯ ಗುಂಪುಗಳನ್ನು ಶೀಘ್ರವಾಗಿ ರಚನೆ ಮಾಡಬೇಕು. ಈ ನಿಟ್ಟಿನಲ್ಲಿ ವಿಆರ್‌ಡಬ್ಲ್ಯೂಗಳು ಕಾರ್ಯಪ್ರವೃತ್ತರಾಗಬೇಕಿದೆ ಎಂದು ತಿಳಿಸಿದ ಅವರು, ಮುಂದಿನ ದಿನಗಳಲ್ಲಿ ಸುಗಮ್ಯ ಯಾತ್ರೆ ಕೈಗೊಳ್ಳಲಾಗುತ್ತಿದ್ದು, ಅಂಗವಿಕಲರ ಸಬಲೀಕರಣಕ್ಕಾಗಿ ಉತ್ತಮ ಸಮೀಕ್ಷೆ ನಡೆಸಬೇಕು ಎಂದು ಹೇಳಿದರು.

ಕನಿಷ್ಟ ವೇತನಕ್ಕೆ ಕ್ರಮ: ಕಾರ್ಮಿಕ ಕಾಯ್ದೆ ಅನುಸಾರ ವಿಆರ್‌ಡಬ್ಲ್ಯೂ, ಎಂ.ಆರ್.ಡಬ್ಲ್ಯೂಗಳಿಗೆ ಕನಿಷ್ಟ ವೇತನ ನೀಡಲು ಅಗತ್ಯ ಕ್ರಮವಹಿಸಲಾಗುವುದು ಎಂದು ಅಂಗವಿಕಲ ವ್ಯಕ್ತಿಗಳ ಹಕ್ಕು ಅಧಿನಿಯಮ ಅನುಷ್ಠಾನದ ರಾಜ್ಯ ಆಯುಕ್ತ ದಾಸ್ ಸೂರ್ಯವಂಶಿ ತಿಳಿಸಿದರು.

ವಿಆರ್‌ಡಬ್ಲ್ಯೂಗಳು ನಿಮ್ಮ ಪಂಚಾಯಿತಿ ವ್ಯಾಪ್ತಿಯ ಅಂಗವಿಕಲರಿಗೆ ದಾರಿದೀಪವಾಗಬೇಕು. ಸಮರ್ಪಣಾ ಮನೋಭಾವದಿಂದ ಕಾರ್ಯನಿರ್ವಹಿಸಿ ಅಂಗವಿಕಲರ ಪರವಾಗಿ, ಅಂಗವಿಕಲರ ಅಭಿವೃದ್ಧಿಗೆ ಶ್ರಮಿಸಬೇಕು ಎಂದು ಸಲಹೆ ನೀಡಿದರು.

ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಜೆ.ವೈಶಾಲಿ ಮಾತನಾಡಿ, ಗ್ರಾಮ ಪಂಚಾಯಿತಿ, ಸರ್ಕಾರಿ ಆಸ್ಪತ್ರೆ, ಗ್ರಂಥಾಲಯ, ಬ್ಯಾಂಕುಗಳು, ಪ್ರವಾಸಿ ಮಂದಿರ ಸೇರಿದಂತೆ ಸಾರ್ವಜನಿಕ ಕಟ್ಟಡಗಳು ವಿಕಲಚೇತನ ಸ್ನೇಹಿಯಾಗಿರಬೇಕು. ಎಲ್ಲ ಕಟ್ಟಡಗಳಿಗೂ ರ್‍ಯಾಂಪ್, ರೇಲಿಂಗ್ಸ್‌ಗಳನ್ನು ಅಳವಡಿಸಿಕೊಳ್ಳಬೇಕು. ಇವೆಲ್ಲವುಗಳನ್ನು ಎಲ್ಲಿ ಅಳವಡಿಸಿದ್ದಾರೆ, ಅಳವಡಿಸಿಲ್ಲ ಎಂಬುವುದರ ಕುರಿತು ನಿಖರ ಮಾಹಿತಿ ಸಂಗ್ರಹಿಸಿದರೆ ಮುಂದಿನ ದಿನಗಳಲ್ಲಿ ಮುಂದಿನದಿನಗಳಲ್ಲಿಭಾರತಸರ್ಕಾರದಿಂದ ಕ್ರಿಯಾ ಯೋಜನೆ ರೂಪಿಸಲು ಹಾಗೂ ಅಗತ್ಯವಿರುವ ಕಡೆ ಅನುದಾನದ ಬೇಡಿಕೆ ಸಲ್ಲಿಸಲು ಸುಗಮ್ಯ ಭಾರತ ಯಾತ್ರಾದಲ್ಲಿ ಪ್ರತಿಯೊಂದು ಸರ್ಕಾರಿ ಕಟ್ಟಡದ ಅಸೆಸ್‌ಮೆಂಟ್ ಮಾಡಬೇಕಿದೆ. ಈ ನಿಟ್ಟಿನಲ್ಲಿ ಯೆಸ್ ಟು ಅಕ್ಸೆಸ್ ಮೊಬೈಲ್ ಆ್ಯಪ್ ಅನ್ನು ಸಹ ನೀಡಲಾಗಿದೆ. ಮುಂದಿನ ದಿನಗಲ್ಲಿ ದಿನಾಂಕ ನಿಗಧಿಪಡಿಸಿ, 15 ದಿನದೊಳಗೆ ಈ ಎಲ್ಲ ಕೆಲಸಗಳನ್ನು ಪೂರ್ಣಗೊಳಿಸಿ, ಆನ್‌ಲೈನ್‌ನಲ್ಲಿ ವರದಿ ಸಲ್ಲಿಸಬೇಕು ಎಂದರು.

ಕಾರ್ಯಕ್ರಮದಲ್ಲಿ ಅಂಗವಿಕಲ ವ್ಯಕ್ತಿಗಳ ಹಕ್ಕು ಅಧಿನಿಯಮ ಅನುಷ್ಠಾನದ ರಾಷ್ಟ್ರೀಯ ಆಯುಕ್ತ ಗೋವಿಂದರಾಜು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಅಧಿಕಾರಿ ಪವಿತ್ರ, ಚಿತ್ರದುರ್ಗ ತಾಲ್ಲೂಕು ಎಂಆರ್‌ಡಬ್ಲ್ಯೂ ಮೈಲಾರಪ್ಪ ಸೇರಿದಂತೆ ಜಿಲ್ಲೆಯ ವಿಆರ್‌ಡಬ್ಲ್ಯೂ, ಎಂಆರ್‌ಡಬ್ಲ್ಯೂಗಳು ಇದ್ದರು.

# ಜಿಲ್ಲಾಡಳಿತ ಭವನ ಕಟ್ಟಡ 6 ತಿಂಗಳಲ್ಲಿ ಪೂರ್ಣ

» **ಚಿತ್ರದುರ್ಗ**

ನೂತನ ಜಿಲ್ಲಾಡಳಿತ ಭವನದ ಕಟ್ಟಡ ನಿರ್ಮಾಣ ಕಾರ್ಯವನ್ನು ಇನ್ನೂ ಆರು ತಿಂಗಳಲ್ಲಿ ಪೂರ್ಣಗೊಳಿಸಿ, ಸಾರ್ವಜನಿಕ ಸೇವೆಗೆ ಲೋಕಾರ್ಪಣೆಗೊಳಿಸಲಾಗುವುದು ಎಂದು ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ತಿಳಿಸಿದರು.

ನಗರದ ಕುಂಚಿಗನಾಳ್ ಕಣಿವೆ ಬಳಿ ನಿರ್ಮಾಣವಾಗುತ್ತಿರುವ ಜಿಲ್ಲಾಡಳಿತ ಭವನದ ಕಟ್ಟಡ ಕಾಮಗಾರಿಗೆ ಭೇಟಿ ನೀಡಿ ಅವರು ಮಾತನಾಡಿದರು.



ರೂ.25 ಕೋಟಿ ವೆಚ್ಚದಲ್ಲಿ ನಿರ್ಮಾಣಕ್ಕೆ ಯೋಜನೆ ರೂಪಿಸಿದ್ದ ಈ ಕಟ್ಟಡಕ್ಕೆ ಈಗಾಗಲೇ ರೂ.46 ಕೋಟಿ ವೆಚ್ಚವಾಗಿದೆ. ಪ್ರಸ್ತುತ ರೂಪಿಸಿರುವ ಯೋಜನೆಯಲ್ಲಿ ಕುಡಿಯುವ ನೀರು, ಕ್ಯಾಂಟೀನ್, ಸಂಪರ್ಕ ರಸ್ತೆ, ಪಾರ್ಕಿಂಗ್, ಅಗ್ನಿನಿಯಂತ್ರಕ ವ್ಯವಸ್ಥೆ, ಕೊರೆದಿರುವ ಗುಡ್ಡಕ್ಕೆ ರಕ್ಷಣಾ ವ್ಯವಸ್ಥೆ, ಪೀಠೋಪಕರಣಗಳು, ಇಂಟಿರಿಯರ್ ಸೇರಿದಂತೆ ಇನ್ನೂ ಹಲವು ಕಾಮಗಾರಿಗಳಿಗೆ ಯೋಜನಾ ವೆಚ್ಚ ಸಿದ್ಧಪಡಿಸಿರುವುದಿಲ್ಲ. ಈ ಎಲ್ಲ ಕಾಮಗಾರಿಗಳಿಗೆ ಇನ್ನೂ ಸುಮಾರು ರೂ.15 ಕೋಟಿ ಅನುದಾನದ ಅವಶ್ಯಕತೆ ಇದೆ ಎಂದು ತಿಳಿಸಿದರು.

ಜಿಲ್ಲಾಡಳಿತ ಭವನದ ಕಟ್ಟಡ ಕಾಮಗಾರಿಗೆ ಸಂಬಂಧಿಸಿದಂತೆ ಕಂದಾಯ ಸಚಿವ ಕೃಷ್ಣಬೈರೇಗೌಡ ಅವರ ಗಮನಕ್ಕೆ ತಂದು, ಸ್ಥಳಕ್ಕೆ ಭೇಟಿ ನೀಡಿ, ಪರಿಶೀಲಿಸಿ, ಹೆಚ್ಚುವರಿ ಅನುದಾನ ಬಿಡುಗಡೆ ಮನವಿ ಮಾಡಲಾಗುವುದು ಎಂದು ಹೇಳಿದರು.ನೂತನ ಜಿಲ್ಲಾಡಳಿತ ಭವನದ ಕಟ್ಟಡದಲ್ಲಿ ಜಿಲ್ಲಾಧಿಕಾರಿಗಳ ಕಚೇರಿ ಸೇರಿದಂತೆ ಹಲವು ಇಲಾಖೆಗಳು ಕಾರ್ಯನಿರ್ವಹಿಸಲಿದ್ದು, ಚಿತ್ರದುರ್ಗ ಉಪವಿಭಾಗ ಕಚೇರಿ ನಗರದೊಳಗೆ ಕಾರ್ಯನಿರ್ವಹಿಸಲಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಚಳ್ಳಕೆರೆ ಶಾಸಕರು ಹಾಗೂ ರಾಜ್ಯ ಸಣ್ಣಕೈಗಾರಿಕೆಗಳ ಅಭಿವೃದ್ಧಿನಿಗಮದ ಅಧ್ಯಕ್ಷ ಟಿ.ರಘುಮೂರ್ತಿ, ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಲೋಕೋಪಯೋಗಿ ಇಲಾಖೆ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಚಂದ್ರಪ್ಪ, ಗುತ್ತಿಗೆದಾರ ಪಾಲಾಕ್ಷಯ್ಯ ಇದ್ದರು.

## ಮನೆ ಮನೆ ಸಮೀಕ್ಷೆಯಲ್ಲಿ ಮಾದಿಗ ಎಂದು ಬರೆಸಿ: ಮಂಜುನಾಥ್



» **ಚಿತ್ರದುರ್ಗ**

ಪರಿಶಿಷ್ಟ ಜಾತಿಯಲ್ಲಿನ 101 ಜಾತಿಗಳಿಗೆ ಒಳ ಮೀಸಲಾತಿ ಕಲ್ಪಿಸುವುದಕ್ಕಾಗಿ ರಾಜ್ಯ ಸರ್ಕಾರ ಮೇ.5 ರಿಂದ ಆರಂಭಿಸಿರುವ ಮನೆ ಮನೆ ಸಮೀಕ್ಷೆಯಲ್ಲಿ ಕರ್ನಾಟಕ ಆದಿಜಾಂಬವ ಅಭಿವೃದ್ಧಿ ನಿಗಮದ ಅಧ್ಯಕ್ಷ ಜಿ.ಎಸ್.ಮಂಜುನಾಥ್ ಪಾಲ್ಗೊಂಡು ಕಡ್ಡಾಯವಾಗಿ ಮಾದಿಗ ಎಂದು ಬರೆಸುವಂತೆ ಜಾಗೃತಿ ಮೂಡಿಸಿದರು.ನಗರದ ಕೆಳಗೋಟೆಯ ಅಂಬೇಡ್ಕರ್ ಬಡಾವಣೆಯಲ್ಲಿ ಗುರುವಾರ ನಡೆದ ಮನೆ ಮನೆ ಗಣತಿಯಲ್ಲಿ ಭಾಗವಹಿಸಿದ್ದ ಜಿ.ಎಸ್.ಮಂಜುನಾಥ್ ಮಾದಿಗ ಜನಾಂಗ ಯಾವುದೇ ಕಾರಣಕ್ಕೂ ಆದಿ ಕರ್ನಾಟಕ, ಆದಿ ದ್ರಾವಿಡ ಎಂದು ನಮೂದಿಸಬಾರದು. ಸಾಮಾಜಿಕ, ಶೈಕ್ಷಣಿಕ, ಆರ್ಥಿಕ, ರಾಜಕೀಯವಾಗಿ ಹಿಂದುಳಿದಿರುವ ಈ ಸಮಾಜ ಜಾತಿ ಗಣತಿಯಲ್ಲಿ ಮಾದಿಗ ಎಂದು ನಮೂದಿಸದಿದ್ದರೆ ಸಮಸ್ಯೆಗಳನ್ನು ಎದುರಿಸಬೇಕಾಗುತ್ತದೆ.

ಪುಟ 2

## ಪ್ರಮುಖ ಸುದ್ದಿ

# ಸುಳ್ಳು ಪ್ರಚಾರ ಮೂಲಕ ರೈತರನ್ನು ತಪ್ಪುದಾರಿಗೆ ಎಳೆಯುತ್ತಿರುವ ಸರ್ಕಾರ: ಹಸಿರುಸೇನೆ ರಾಜ್ಯ ಉಪಾಧ್ಯಕ್ಷ ರೆಡ್ಡಿಹಳ್ಳಿ ವೀರಣ್ಣ

» **ಚಳ್ಳಕೆರೆ**

ರಾಜ್ಯ ಸರ್ಕಾರ ಸೋಲಾರ್ ಕಂಪನಿಗಳ ಆಮೀಷಕ್ಕೆ ಒಳಗಾಗಿ ರೈತರ ವಿದ್ಯುತ್ ಬಳಕೆಗೆ ಅಡ್ಡಿಯುಂಟು ಮಾಡುವುದಲ್ಲದೆ, ರೈತರು ಬಳಸುವ ವಿದ್ಯುತನ್ನು ಪೂರ್ಣಪ್ರಮಾಣದಲ್ಲಿ ಕಡಿತಗೊಳಿಸಿ ಸೋಲಾರೀಕರಣದ ಮೂಲಕ ರೈತರ ಬದುಕಿಗೆ ಕೊಳ್ಳಿ ಇಡುವ ಕೆಲಸ ಮಾಡುತ್ತಿದೆ. ಕೂಡಲೇ ಸರ್ಕಾರ ಎಚ್ಚೆತ್ತುಕೊಂಡು ಕಾರ್ಪೋರೇಟ್ ಮತ್ತು ಸೋಲಾರ ಕಂಪನಿಗಳಿಗೆ ರೈತರನ್ನು ಬಲಿಕೊಡಬಾರದು ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರುಸೇನೆ ರಾಜ್ಯ ಉಪಾಧ್ಯಕ್ಷ ರೆಡ್ಡಿಹಳ್ಳಿವೀರಣ್ಣ ಒತ್ತಾಯಿಸಿದರು.



ಅವರು, ಗುರುವಾರ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ರೈತರಿಗೆ ಮಾರಕವಾದ ಕಾನೂನು ಜಾರಿಗೆ ತರುತ್ತಿದ್ದು ಇವುಗಳ ವಿರುದ್ಧ ನೂರಾರು ರೈತರೊಂದಿಗೆ ಪ್ರತಿಭಟನೆ ನಡೆಸಿ ತಹಶೀಲ್ದಾರ್‌ಗೆ ಮನವಿ ಅರ್ಪಿಸಿ ಮಾತನಾಡಿದರು. ಸರ್ಕಾರ ಇತ್ತೀಚಿನ ದಿನಗಳಲ್ಲಿ ರೈತರ ಪಂಪ್‌ಸೆಟ್‌ಗಳಿಗೆ ಮೀಟರ್ ಅಳವಡಿಸುವ ಕಾರ್ಯಕ್ಕೆ ಕೈಹಾಕಿದೆ. ರೈತರು ಬಳಸುವ ವಿದ್ಯುತ್ ಅಕ್ರಮವಲ್ಲ ಅದು ಸಕ್ರಮ, ಸೋಲಾರಕಂಪನಿಗೆ ವರ್ಗಾವಣೆ ಮಾಡುವುದು ಕಾನೂನು ಬಾಹಿರ, ಅದೇ ರೀತಿ ಕಾರ್ಪೋರೇಟ್ ಕಂಪನಿಗಳ ಆಮೀಷಕ್ಕೆ ಒಳಗಾಗಿ ರೈತರಿಗೆ ಮಾರಕವಾದ ಕಾನೂನನ್ನು ಜಾರಿಗೆ ತರಲು ಮುಂದಾಗಿರುವುದು ಸರಿಯಲ್ಲ. ಕಳೆದ ಎರಡು ವರ್ಷಗಳಿಂದ ಯಾವುದೇ ಸಬ್ಸಿಡಿ, ಬೆಳೆ ವಿಮೆ ಇನ್ನಿತರೆ ಸೌಲಭ್ಯಗಳು ದೊರೆಯುತ್ತಿಲ್ಲ. ಕೇವಲ ಪತ್ರಿಕಾಜಾಹೀರಾತುಗಳಲ್ಲಿ ಮಾತ್ರ ರೈತ ಸಮುದಾಯಕ್ಕೆ ಆರ್ಥಿಕ ನೆರವು ನೀಡಲಾಗಿದೆ ಎಂದು ಪ್ರಚಾರ ಪಡೆಯುವ ಸರ್ಕಾರ ರೈತರ ಹಿತಾಸಕ್ತಿಯನ್ನು ಕಾಯುವುದರಲ್ಲಿ ವಿಫಲವಾಗಿದೆ ಎಂದು ಆರೋಪಿಸಿದರು.

ಮನವಿ ಸ್ವೀಕರಿಸಿ ಮಾತನಾಡಿದ ತಹಶೀಲ್ದಾರ್ ರೇಹಾನ್‌ಪಾಷ, ತಮ್ಮ ಮನವಿಯನ್ನು ಜಿಲ್ಲಾಧಿಕಾರಿಗಳ ಮೂಲಕ ಸರ್ಕಾರಕ್ಕೆ ಕಳಿಸುವ ಭರವಸೆ ನೀಡಿದರು. ತಾಲ್ಲೂಕುಅಧ್ಯಕ್ಷಕೆ.ಎಸ್.ಶ್ರೀಕಂಠಮೂರ್ತಿ, ಪ್ರಧಾನ ಕಾರ್ಯದರ್ಶಿ ತಿಪ್ಪೇಸ್ವಾಮಿ, ಹಿರೇಹಳ್ಳಿಯರ್ರಿಸ್ವಾಮಿ, ಎಂ.ಎನ್. ಚನ್ನಕೇಶವಮೂರ್ತಿ, ಶಿವಕುಮಾರ್, ರಾಜಣ್ಣ, ಓಬಯ್ಯ, ಬಿ.ಜಿ.ತಿಪ್ಪೇಸ್ವಾಮಿ, ಸಣ್ಣಪಾಲಯ್ಯ, ಲಕ್ಷ್ಮಿದೇವಿ, ರತ್ನಮ್ಮ, ಶಿವಮ್ಮ, ಕೆ.ಕೃಷ್ಣಪ್ಪ, ರಂಗಸ್ವಾಮಿ, ಎಂ.ತಿಮ್ಮಾರೆಡ್ಡಿ, ಹನುಮಂತಪ್ಪ, ತಿಪ್ಪೇಸ್ವಾಮಿ ಮುಂತಾದವರು ಪಾಲ್ಗೊಂಡಿದ್ದರು.

ಫಾಸ್ಟ್ ನ್ಯೂಸ್

## ಮನೆ ಮನೆ ಸಮೀಕ್ಷೆಯಲ್ಲಿ ಮಾದಿಗ ಎಂದು ಬರೆಸಿ: ಮಂಜುನಾಥ್

» ಮೊದಲ ಪುಟದಿಂದ

ಪರಿಶಿಷ್ಟ ಜಾತಿಯಲ್ಲಿನ ಒಳ ಜಾತಿಗಳಿಗೆ ಆಯಾ ಜನಸಂಖ್ಯೆಗನುಗುಣವಾಗಿ ಮೀಸಲಾತಿಯನ್ನು ಕಲ್ಪಿಸಲು ನೆರವಾಗಲಿದೆ ಎಂದರು. ಒಳ ಮೀಸಲಾತಿಯನ್ನು ಜಾರಿಗೊಳಿಸುವ ಅಧಿಕಾರ ಆಯಾ ರಾಜ್ಯ ಸರ್ಕಾರಗಳಿಗಿದೆ ಎಂದು ಸುಪ್ರೀಂಕೋರ್ಟ್ ನೀಡಿರುವ ಮಹತ್ತರ ತೀರ್ಪಿನಂತೆ ರಾಜ್ಯ ಸರ್ಕಾರ ಒಳ ಮೀಸಲಾತಿ ವರ್ಗಿಕರಣಕ್ಕೆ ಮುಂದಾಗಿದ್ದು, ಮೇ 17 ರವರೆಗೆ ಜಾತಿ ಸಮೀಕ್ಷೆ ನಡೆಯಲಿದೆ.

ಗಣತಿದಾರರು ಮನೆ ಮನೆಗೆ ಭೇಟಿ ನೀಡಿದಾಗ ನಿಖರವಾದ ಮಾಹಿತಿ ನೀಡಿ ಮಾದಿಗ ಎಂದು ಬರೆಸಿ ಶೈಕ್ಷಣಿಕ ಮತ್ತು ಉದ್ಯೋಗಕ್ಕೆ ಅವಕಾಶ ಮಾಡಿಕೊಳ್ಳಬೇಕಿದೆ ಎಂದು ತಿಳಿಸಿದರು.

## ವೃದ್ಧ ಕಾಣೆ

» ದಾವಣಗೆರೆ

ಮಲೇಬೆನ್ನೂರು ಪೊಲೀಸ್ ಠಾಣೆಯ ವ್ಯಾಪ್ತಿಯ ಕೊಮರನಹಳ್ಳಿ ಗ್ರಾಮದ ಯಲ್ಲಪ್ಪ ಹಿರೇಬಿದರಿ ಬಿನ್ ಭರಮಪ್ಪ 56 ವರ್ಷ, ಇವರು ಕಳೆದ ಮೇ.2 ರಂದು ಮನೆಯಲ್ಲಿ ಯಾರಿಗೂ ಹೇಳದೇ ಮನೆಯಿಂದ ಹೋದವರು ಇದೂವರೆಗೂ ಮನೆಗೂ ಬಾರದೇ ಕಾಣೆಯಾಗಿರುತ್ತಾರೆ. ಚಹರೆ ವಿವರ ಇಂತಿದೆ. ಎತ್ತರ 5 ಅಡಿ, ದುಂಡು ಮುಖ, ಕನ್ನಡ ಭಾಷೆ ಮಾತನಾಡುತ್ತಾರೆ. ಹೋಗುವಾಗ ಬಿಳಿ ಪಂಚೆ ಹಾಗೂ ಶರ್ಟ್ ಧರಿಸಿರುತ್ತಾರೆ. ಇವರ ಬಗ್ಗೆ ಸುಳಿವು ಸಿಕ್ಕಲ್ಲಿ ದೂ.ಸಂ: 08192-253100, 268758, 272018, 262550, 9480803259, 9480803234 ಮಾಹಿತಿ ನೀಡಬೇಕೆಂದು ಮಾಯಾಕೊಂಡ ಪೊಲೀಸ್ ಠಾಣೆಯ ಪೊಲೀಸ್ ಸ□□ಇನ್ಸ್ ಪೆಕ್ಟರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಾರಿಗೆ ಅದಾಲತ್

» ದಾವಣಗೆರೆ

ಮೇ 16 ರಂದು ಬೆಳಿಗ್ಗೆ 11 ಗಂಟೆಗೆ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಸಾರಿಗೆ ಅದಾಲತ್ ಆಯೋಜಿಸಲಾಗಿದೆ. ಸಾರ್ವಜನಿಕರು ಸಾರಿಗೆ ಸೌಕರ್ಯದ ಕುಂದು ಕೊರತೆ ಬಗ್ಗೆ ಅದಾಲತ್‌ನಲ್ಲಿ ಪರಿಹಾರ ಕಂಡುಕೊಳ್ಳಬಹುದೆಂದು ಸಾರಿಗೆ ಅಧಿಕಾರಿ ಸಿ.ಎಸ್ ಪ್ರಮುತೇಶ್ ತಿಳಿಸಿದ್ದಾರೆ.

## ಮೇ.14 ರಿಂದ 28ರವೆಗೆ ಗ್ರಾಮ ಪಂಚಾಯಿತಿ ಉಪಚುನಾವಣೆ

» ದಾವಣಗೆರೆ

ರಾಜ್ಯ ಚುನಾವಣಾ ಆಯೋಗ ಆದೇಶದನ್ವಯ ದಾವಣಗೆರೆಜಿಲ್ಲೆಯವಿವಿಧಗ್ರಾಮಪಂಚಾಯಿಗಳಲ್ಲಿ ವಿವಿಧ ಕಾರಣಗಳಿಂದ ತೆರವಾದ ಖಾಲಿ ಸದಸ್ಯ ಸ್ಥಾನಗಳಿಗೆ ಉಪಚುನಾವಣೆ ನಡೆಸಲು ವೇಳಾಪಟ್ಟಿ ಪ್ರಕಟಿಸಲಾಗಿದೆ ಎಂದು ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ತಿಳಿಸಿದ್ದಾರೆ.

ಚುನಾವಣಾ ವೇಳಾಪಟ್ಟಿ :

ಮೇ.08 ರಂದು ಚುನಾವಣೆ ಅಧಿಸೂಚನೆ ಹೊರಡಿಸಲಾಗಿದ್ದು, ಮೇ 14ರ ಬುಧವಾರದಿಂದ 28 ರವರೆಗೆ ಚುನಾವಣೆ ನಡೆಯಲಿದೆ. ಮೇ.14 ನಾಮಪತ್ರ ಸಲ್ಲಿಸಲು ಕೊನೆಯದಿನ. ಮೇ.15 ನಾಮಪತ್ರಗಳ ಪರಿಶೀಲನೆ, ಮೇ.17 ಉಮೇದುವಾರಿಕೆ ಹಿಂತೆಗೆದುಕೊಳ್ಳಲು ಕೊನೆಯ ದಿನವಾಗಿದೆ. ಮತದಾನ ಅವಶ್ಯವಿದ್ದರೆ ಮೇ.25ರ ಬೆಳಿಗ್ಗೆ 7 ರಿಂದ ಸಂಜೆ 5 ರವರೆಗೆ ಮತದಾನ ನಡೆಸಲಾಗುವುದು. ಮೇ.28 ರಂದು ಚುನಾವಣೆ ಪ್ರಕ್ರಿಯೆ ಮುಕ್ತಾಯಗೊಳ್ಳಲಿದೆ.

ಚುನಾವಣಾ ನಡೆಯುವ ಗ್ರಾಮ ಪಂಚಾಯಿತಿ, ಸದಸ್ಯ ಸ್ಥಾನಗಳ ವಿವರ:

ಜಿಲ್ಲೆಯ ದಾವಣಗೆರೆ ತಾಲ್ಲೂಕಿನ ಹದಡಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹದಡಿ-01 ಕ್ಷೇತ್ರದ ಅನುಸೂಚಿತ ಜಾತಿ 1 ಸದಸ್ಯ ಸ್ಥಾನ, ಅತ್ತಿಗೆರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕಬ್ಬೂರು-05 ಕ್ಷೇತ್ರದ ಸಾಮಾನ್ಯ 1 ಸದಸ್ಯ ಸ್ಥಾನ ಹಾಗೂ ಹರಿಹರ ತಾಲ್ಲೂಕಿನ ಕೊಂಡಜ್ಜಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗಂಗನರಸಿ-8 ಕ್ಷೇತ್ರದ ಹಿಂದುಳಿದ ವರ್ಗ 'ಅ', ಸಾಮಾನ್ಯ ಮತ್ತು ಸಾಮಾನ್ಯ (ಮಹಿಳೆ) 1 ಸದಸ್ಯ ಸ್ಥಾನ ಹಾಗೂ ಗಂಗನರಸಿ-9 ಕ್ಷೇತ್ರದ ಅನುಸೂಚಿತ ಜಾತಿ (ಮಹಿಳೆ), ಸಾಮಾನ್ಯರಿಗೆ 2 ಸದಸ್ಯ ಸ್ಥಾನ, ಎಳೆಹೊಳೆ ಗ್ರಾಮ ಪಂಚಾಯಿತಿಯ ಮಳಲಹಳ್ಳಿ-5 ಕ್ಷೇತ್ರದ ಅನುಸೂಚಿತ ಪಂಗಡ ಸದಸ್ಯ ಸ್ಥಾನ ಹಾಗೂ ಜಗಳೂರು ತಾಲ್ಲೂಕಿನ ಮುಸ್ಟೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮೂಡಲ ಮಾಚಿಕೆರೆ-3 ಕ್ಷೇತ್ರದ ಸಾಮಾನ್ಯ 1 ಸದಸ್ಯ ಸ್ಥಾನಕ್ಕೆ ಉಪಚುನಾವಣೆ ನಡೆಸಲಾಗುವುದು ಎಂದು ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಆನ್‌ಲೈನ್ ಅರ್ಜಿ ಆಹ್ವಾನ

» ತುಮಕೂರು

ಜಿಲ್ಲೆಯ ತುರುವೇಕೆರೆ ತಾಲ್ಲೂಕು ಅಮ್ಮಸಂದ್ರದ ಹಡವನಹಳ್ಳಿಯಲ್ಲಿರುವ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ 2025-26ನೇ ಸಾಲಿನ ಐಟಿಐ ದಾಖಲಾತಿಗಾಗಿ ಆನ್‌ಲೈನ್ ಅರ್ಜಿ ಆಹ್ವಾನಿಸಲಾಗಿದೆ. ವೆಬ್‌ಸೈಟ್: www.cite.karnataka.gov.in ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಮೊ.ಸಂ. 9743539690/ 8884069548/ 9482929710/ 9449926855/ 9980129515ನ್ನು ಸಂಪರ್ಕಿಸಬಹುದು.

# ಡಾ.ಅಂಬೇಡ್ಕರ್ ಮತ್ತು ಬಾಬುಜೀ ನೀಡಿದ ಕೊಡುಗೆ ಯಾರೂ ಮರೆಯಲು ಸಾಧ್ಯವಿಲ್ಲ: ಶಾಸಕ ರಘುಮೂರ್ತಿ

» ಚಳ್ಳಕೆರೆ



ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಮತ್ತು ಹಸಿರುಕ್ರಾಂತಿಹರಿಕಾರ ಬಾಬು ಜಗಜೀವನರಾಮ್ ರಾಷ್ಟ್ರದ ಶೋಷಿತ ಸಮುದಾಯದ ಸರ್ವತೋಮುಖ ಅಭಿವೃದ್ಧಿಗಾಗಿ ಹೋರಾಟ ನಡೆಸಿದವರು. ದಲಿತರೂ ಸೇರಿದಂತೆ ಅಲಕ್ಷಿತಗೊಂಡ ಎಲ್ಲಾ ಸಮುದಾಯಗಳಿಗೂ ಸರ್ಕಾರದ ಸೌಲಭ್ಯಗಳನ್ನು ಪಡೆಯುವ ಅವಕಾಶವನ್ನು ಇಬ್ಬರು ನಾಯಕರುಮಾಡಿದ್ದಾರೆ. ಡಾ.ಬಿ.ಆರ್.ಅಂಬೇಡ್ಕರ್ ಮತ್ತು ಬಾಬುಜಗಜೀವನರಾವ್‌ರವರ ಕೊಡುಗೆಗಳನ್ನು ಎಂದಿಗೂ ಯಾರೂ ಮರೆಯಬಾರದು ಎಂದು ಕ್ಷೇತ್ರದ ಶಾಸಕ, ಸಣ್ಣಕೈಗಾರಿಕೆ ಅಭಿವೃದ್ಧಿಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು. ಅವರು, ಬುಧವಾರ ಸಂಜೆ ನಗರಂಗೆರೆ ಗ್ರಾಮದ ಖಾಸಗಿಬಸ್‌ನಿಲ್ದಾಣದರಂಗಮಂದಿರದಲ್ಲಿ ದಲಿತ ಸಂಘಟನೆಗಳು ಹಮ್ಮಿಕೊಂಡಿದ್ದ ಡಾ.ಬಿ.ಆರ್.ಅಂಬೇಡ್ಕರ್‌ರವರ 134ನೇ ಮತ್ತು ಬಾಬು ಜಗಜೀವನರಾಮ್ 118ನೇ ಜನ್ಮದಿನೋತ್ಸವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ದಲಿತ ಸಂಘಟನೆಗಳ ಹಿರಿಯ ನೇತಾರ, ಮಾಜಿ ಜಿಲ್ಲಾಪಂಚಾಯಿತಿ ಸದಸ್ಯ ಬಿ.ಪಿ.ಪ್ರಕಾಶ್‌ಮೂರ್ತಿ ಮಾತನಾಡಿ, ದಲಿತರಿಗೆ ಒಳಮೀಸಲಾತಿ ನೀಡುವಕುರಿತು ಸುಮಾರು ನಾಲ್ಕು ದಶಕಗಳ ಹೋರಾಟ ಸಫಲವಾಗುತ್ತಿದೆ. ಈಗಾಗಲೇ ಸರ್ಕಾರ ಜಾತಿಸಮೀಕ್ಷೆ ಆರಂಬಿಸಿದ್ದು ಸಮೀಕ್ಷೆ ಸಂದರ್ಭದಲ್ಲಿ ಪ್ರತಿಯೊಬ್ಬರೂ ಮಾದಿಗ ಎಂದು ಪ್ರಧಾನವಾಗಿ ಬರೆಸಬೇಕೆಂದರು.

ತಾಲ್ಲೂಕು ಪಂಚಾಯಿತಿ ಮಾಜಿ ಸದಸ್ಯ ಸಮರ್ಥರಾಯ ಮಾತನಾಡಿ, ಇಂದು ದಲಿತ ಸಮುದಾಯ ರಾಜಕೀಯ ಕ್ಷೇತ್ರದಲ್ಲಿ ಪ್ರಾತಿನಿತ್ಯ ಪಡೆದಿದೆಯಾದರೆ ಅದಕ್ಕೆ ಡಾ.ಬಿ.ಆರ್.ಅಂಬೇಡ್ಕರ್ ಮತ್ತು ಬಾಬು ಜಗಜೀವನರಾಮ್ ಮೂಲಕಾರಣರು. ಇಬ್ಬರೂ ಮಹಾನ್‌ನಾಯಕರು ಹತ್ತಾರು ವರ್ಷಗಳ ಕಾಲ ನ್ಯಾಯವನ್ನು ಒದಗಿಸಲು ಧೀಮಂತ ಹೋರಾಟ ನಡೆಸಿದ್ದಾರೆ. ಅವರ ಆದರ್ಶಗಳನ್ನು ಮೈಗೂಡಿಸಿಕೊಂಡು ನಾವೆಲ್ಲರೂ ನಡೆಯಬೇಕೆಂದರು.

ಕಾರ್ಯಕ್ರಮದಲ್ಲಿ ತಾಲ್ಲೂಕು ಗ್ಯಾರಂಟಿ ಸಮಿತಿ ಅಧ್ಯಕ್ಷ ಗದ್ದಿಗೆತಿಪ್ಪೇಸ್ವಾಮಿ, ಕೆಡಿಪಿ ನಾಮನಿರ್ದೇಶಕ ಸದಸ್ಯ ಅಂಗಡಿರಮೇಶ್, ಮುಖಂಡರಾದ ರಂಗನಾಥ, ನಿಂಗಪ್ಪ, ಅಜ್ಮತ್‌ವುಲ್ಲಾ, ಲಿಂಗಣ್ಣ, ಮೈನಾಕುಮಾರ್, ರಾಜು ಮುಂತಾದವರು ಭಾಗವಹಿಸಿದ್ದರು.

# ಸಂಚಾರಿ ಆರೋಗ್ಯ ಘಟಕ ವಾಹನಕ್ಕೆ ಚಾಲನೆ

» ಚಿತ್ರದುರ್ಗ




ನೋಂದಾಯಿತ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರು ಹಾಗೂ ಅವರ ಅವಲಂಬಿತರ ಆರೋಗ್ಯ ತಪಾಸಣೆ ಹಾಗೂ ಚಿಕಿತ್ಸೆ ಒದಗಿಸುವ ಸಂಚಾರಿ ಆರೋಗ್ಯ ಘಟಕದ ಎರಡು ವಾಹನಗಳಿಗೆ ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್, ಚಳ್ಳಕೆರೆ ಶಾಸಕ ಟಿ.ರಘುಮೂರ್ತಿ ಚಾಲನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ ಗುರುವಾರ ಕಾರ್ಮಿಕ ಇಲಾಖೆ ಹಾಗೂ ಕಟ್ಟಡ ಮತ್ತು ಇತರೆ ನಿರ್ಮಾಣ ಕಲ್ಯಾಣ ಮಂಡಳಿ ವತಿಯಿಂದ ಅನುಷ್ಠಾನಗೊಳಿಸುತ್ತಿರುವ ಸಂಚಾರಿ ಆರೋಗ್ಯ ಕ್ಲಿನಿಕ್‌ಗಳಿಗೆ ಹಸಿರು ನಿಶಾನೆ ತೋರಿಸುವ ಮೂಲಕ ಚಾಲನೆ ನೀಡಿದರು.

ಈ ವೇಳೆ ಮಾತನಾಡಿದ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್, ಕಾರ್ಮಿಕರ ಆರೋಗ್ಯ ಕಾಪಾಡುವ ನಿಟ್ಟಿನಲ್ಲಿ ಸರ್ಕಾರ ಕ್ರಮವಹಿಸಿದ್ದು, ಈ ನಿಟ್ಟಿನಲ್ಲಿ ಜಿಲ್ಲೆಯ ಕಟ್ಟಡ ನಿರ್ಮಾಣ ಕಾರ್ಮಿಕರನ್ನು ಅವರಿರುವ ಸ್ಥಳಕ್ಕೆ ತೆರಳಿ ಉಚಿತವಾಗಿ ಆರೋಗ್ಯ ತಪಾಸಣೆಗೆ ಒಳಪಡಿಸುವುದು, ಚಿಕಿತ್ಸೆ ಹಾಗೂ ಸಲಹೆ ಸೇರಿದಂತೆ ಮೊದಲಾದ ಸೇವೆ ಒದಗಿಸಲು ಸಂಚಾರಿ ಆರೋಗ್ಯ ಕ್ಲಿನಿಕ್‌ಗಳು ಕಾರ್ಯಾರಂಭಗೊಂಡಿದ್ದು, ನೋಂದಾಯಿತ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರು, ಅವರ ಅವಲಂಬಿತರು ಈ ಯೋಜನೆಯ ಸದುಪಯೋಗ ಪಡೆದುಕೊಳ್ಳಬೇಕು ಎಂದು ಮನವಿ ಮಾಡಿದರು.

ಕಾರ್ಮಿಕ ಅಧಿಕಾರಿ ಅನಿಲ ಬಾಲಚಂದ್ರ ಬಗಟಿ ಮಾತನಾಡಿ, ಎರಡು ತಾಲ್ಲೂಕುಗಳಿಗೆ ಒಂದರಂತೆ ಜಿಲ್ಲೆಗೆ ಮೂರು ಸಂಚಾರಿ ಆರೋಗ್ಯ ಘಟಕ ವಾಹನಗಳು ಮಂಜೂರಾಗಿದ್ದು, ಸದ್ಯದ ಮಟ್ಟಿಗೆ ಎರಡು ವಾಹನಗಳು ಕಾರ್ಯನಿರ್ವಹಿಸಲಿವೆ ಎಂದು ಹೇಳಿದರು.

ಸಂಚಾರಿ ಆರೋಗ್ಯ ಘಟಕವು ರೂಟ್ ಮ್ಯಾಪ್‌ನಂತೆ ನಿಗಧಿತ ಸ್ಥಳಗಳಲ್ಲಿ ಕನಿಷ್ಠ 4 ಗಂಟೆ ಕಾರ್ಯನಿರ್ವಹಿಸಲಿದೆ. ಸಂಚಾರಿ ಆರೋಗ್ಯ ಘಟಕದಲ್ಲಿ ವೈದ್ಯರು ಒಳಗೊಂಡಂತೆ, ಒಟ್ಟು ಆರು ಸಿಬ್ಬಂದಿಗಳು ಕಾರ್ಯನಿರ್ವಹಿಸಲಿದ್ದಾರೆ. ಈ ಘಟಕದಲ್ಲಿ ವೈದ್ಯಕೀಯ ಉಪಕರಣಗಳು, ಪ್ರಯೋಗಾಲಯಗಳು ಹಾಗೂ ವೈದ್ಯಕೀಯ ಬಳಕೆಯ ವಸ್ತುಗಳು ಲಭ್ಯವಿವೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಚಳ್ಳಕೆರೆ ಶಾಸಕರು ಹಾಗೂ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದ ಅಧ್ಯಕ್ಷ ಟಿ.ರಘುಮೂರ್ತಿ, ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಕಾರ್ಮಿಕ ನಿರೀಕ್ಷಕರಾದ ರಾಜಣ್ಣ, ಕುಸುಮ, ಬಾಲಕಾರ್ಮಿಕ ಯೋಜನಾ ಸೊಸೈಟಿ ಯೋಜನಾ ನಿರ್ದೇಶಕ ಪಿ.ಸತೀಶ್ ಕುಮಾರ್ ಸೇರಿದಂತೆ ಕಾರ್ಮಿಕ ಸಂಘಟನೆಗಳ ಮುಖಂಡರು ಇದ್ದರು.

## ಕೃತಕ ಬಣ್ಣದ ಮಾವಿನ ಹಣ್ಣನ್ನು ತ್ಯಜಿಸಿ: ಫಲವತ್ತಾದ ಹಣ್ಣನ್ನು ಬಳಸಿ

» ಚಳ್ಳಕೆರೆ



ಪ್ರತಿವರ್ಷವೂ ಯುಗಾದಿ ಹಬ್ಬದ ನಂತರ ಮಾವಿನ ಹಣ್ಣಿನ ಕಾಲ ಶುರುವಾಗುತ್ತದೆ. ಪ್ರಾರಂಭದಲ್ಲಿ ಎಲ್ಲರೂ ರುಚಿಯಾದ, ಸವಿಯಾದ ಆಕರ್ಷಕ ಬಣ್ಣವಿರುವ ಮಾವಿನ ಹಣ್ಣನ್ನು ಖರೀದಿಸಿ ಸೇವಿಸುವುದು ವಾಡಿಕೆ. ಆದರೆ, ಮಾವಿನ ಹಣ್ಣನ್ನು ಖರೀದಿಸಿ ಉಪಯೋಗಿಸುವ ಮುನ್ನ ಗ್ರಾಹಕರು ಎಚ್ಚರಿಕೆ ವಹಿಸಬೇಕೆಂದು ತೋಟಗಾರಿಕೆ ಮಹಾವಿದ್ಯಾಲಯದ ಸಹಾಯಕ ಪ್ರಾಧ್ಯಾಪಕ ಡಾ.ಆರ್.ಶ್ರೀಧರ ಮನವಿ ಮಾಡಿದ್ದಾರೆ.



ಇತ್ತೀಚಿನ ದಿನಗಳಲ್ಲಿ ವ್ಯಾಪಾರಸ್ಥರು ಹಾಗೂ ಖರೀದಿದಾರರು ಗ್ರಾಹಕರನ್ನು ಸೆಳೆಯುವ ದೃಷ್ಟಿಯಿಂದ ಮಾವಿನ ಹಣ್ಣಿಗೆ ಕೃತಕವಾಗಿ ಕ್ಯಾಲ್ಸಿಯಂ ಕಾರ್ಬೈಡ್ ಎಂಬ ರಸಾಯನಿಕ ವಸ್ತು ಬಳಸಿ ಹಣ್ಣು ಮಾಡುತ್ತಾರೆ. ಆದರೆ, ಮಾವಿನ ಹಣ್ಣಿನ ಒಳತಿರುಳು ಮಾತ್ರ ಹಳದಿಬಣ್ಣದಾಗಿರುತ್ತದೆ, ರುಚಿಯೂ ಕಡಿಮೆ. ಆದ್ದರಿಂದ ಮನೆಯಲ್ಲೇ ಮಾವಿನ ಹಣ್ಣನ್ನು ಸಿದ್ದಪಡಿಸಿ ಉಪಯೋಗಿಸುವಂತೆ ಮನವಿ ಮಾಡಿದ್ದಾರೆ.

ಮಾವಿನ ಮರದಲ್ಲೇ ಪಕ್ವವಾದ ಮಾವಿನ ಕಾಯನ್ನು ಕಿತು, ಮನೆಯಲ್ಲೇ ದಿನಪತ್ರಿಕೆ, ಒಣಹುಲ್ಲುನೊಂದಿಗೆ ಮುಚ್ಚಿ ಸ್ವಲ್ಪದಿನ ಕಾದನಂತರ ಅವುಗಳನ್ನು ತೆರದುನೋಡಿದರೆ ಮಾವಿನ ಹಣ್ಣಿನಲ್ಲಿ ರುಚಿತುಂಬಿರುತ್ತದೆ. ಇಂತಹ ಹಣ್ಣನ್ನು ಉಪಯೋಗಿಸುವುದು ಒಳ್ಳೆಯದ್ದು ಸಾರ್ವಜನಿಕರು ಗುಣಮಟ್ಟದ ರುಚಿಯಾದ ಮಾವಿನ ಹಣ್ಣನ್ನು ಸೇವಿಸಲು ಈ ವಿಧಾನ ಅನುಸರಿಸಬೇಕು ಎಂದಿದ್ದಾರೆ.

### ಒಳಮೀಸಲಾತಿ ಸಮೀಕ್ಷೆ: ಆಲ್ ಇಂಡಿಯಾ ಬಹುಜನ ಸಮಾಜ ಪಾರ್ಟಿ ಜಾಗೃತಿ

# ಪ್ರಧಾನ ಜಾತಿಜೊತೆಗೆ ಉಪಜಾತಿ ನೊಂದಾಯಿಸಿ: ಶಿವಮೂರ್ತಿ

» ಚಳ್ಳಕೆರೆ



ರಾಜ್ಯದ ವಿವಿಧ ದಲಿತ ಸಂಘಟನೆಗಳು ನಿರಂತರ ಹೋರಾಟ ನಡೆಸಿದ ಹಿನ್ನೆಲೆಯಲ್ಲಿ ನ್ಯಾಯಮೂರ್ತಿ ನಾಗಮೋಹನ್‌ದಾಸ್ ವರದಿಯಂತೆ ಮಾದಿಗ ಸಮುದಾಯಕ್ಕೆ ಒಳಮೀಸಲಾತಿ ಜಾರಿಕುರಿತು ಸಮೀಕ್ಷೆ ಕಾರ್ಯ ಆರಂಭವಾಗಿದ್ದು ಸಮೀಕ್ಷೆಯಲ್ಲಿ ಪ್ರತಿಯೊಬ್ಬರೂ ಮಾದಿಗ ಎಂದು ನಮೂದಿಸುವಂತೆ ಆಲ್‌ಇಂಡಿಯಾ ಬಹುಜನಸಮಾಜ ಪಾರ್ಟಿ ರಾಜ್ಯಕಾರ್ಯದರ್ಶಿ ಎಚ್. ಎನ್.ಭೀಮನಕೆರೆಶಿವಮೂರ್ತಿ ಮನವಿ ಮಾಡಿದರು.

ನಗರದ ಪಕ್ಷದ ಕಾರ್ಯಾಲಯದಲ್ಲಿ ಪತ್ರಿಕಾಗೋಷ್ಠಿಉದ್ದೇಶಿಸಿಮಾತನಾಡಿದವರು, ಪರಿಶಿಷ್ಟಜಾತಿಯಲ್ಲಿಒಟ್ಟು101ಉಪಜಾತಿಗಳಿವೆ ಹೊಲೆಯ, ಮಾದಿಗ, ದೋಹಾರ, ಮಚ್ಚೆಗಾರ, ಆದಿಕರ್ನಾಟಕ, ಆದಿದ್ರಾವಿಡ, ಸಮಗಾರ, ಕೊರಚ, ಕೊರಮ ಮುಂತಾದ ಉಪಜಾತಿಗಳಿದ್ದು ಸಮೀಕ್ಷೆ ಸಂದರ್ಭದಲ್ಲಿ ಆಧಾರಕಾರ್ಡ್‌ನೊಂದಿಗೆ ಜಾತಿ ಪ್ರಮಾಣದ ಆರ್‌ಡಿ ನಂಬರನ್ನು ಅಪ್ಲೋಡ್ ಮಾಡಿಸುವಂತೆ ಮನವಿ ಮಾಡಿದ್ದಾರೆ. ಸಮೀಕ್ಷೆ ಸಂದರ್ಭದಲ್ಲಿ ಯಾವುದೇ ಲೋಪವಾಗದಂತೆ ಜಾಗೃತಿವಹಿಸಬೇಕು ಎಂದಿದ್ದಾರೆ. ಪತ್ರಿಕಾಗೋಷ್ಠಿಯಲ್ಲಿ ಜಿಲ್ಲಾಧ್ಯಕ್ಷ ಎನ್.ಪ್ರಕಾಶ್, ಕಾರ್ಯದರ್ಶಿ ಪಾತಲಿಂಗಪ್ಪ, ಕೆ.ಶಿವಣ್ಣ, ಖಜಾಂಚಿ ಎಚ್.ಆರ್.ಶ್ರೀನಿವಾಸ್ ಮುಂತಾದವರು ಉಪಸ್ಥಿತರಿದ್ದರು.

ಪ್ರಮುಖ ಸುದ್ದಿ

# ಹೊಳಲ್ಕೆರೆ ಪಟ್ಟಣದ ಬಂಡಿಚಿಕ್ಕಮ್ಮ ಸಿಡಿ ಉತ್ಸವ ಇಂದು

» ಹೊಳಲ್ಕೆರೆ



ಪಟ್ಟಣದ ಗ್ರಾಮದ ದೇವತೆ ಬಂಡಿಚಿಕ್ಕಮ್ಮ ದೇವಿ ಜಾತ್ರೋತ್ಸವ ಹಾಗೂ ಸಿಡಿ ಉತ್ಸವ ಮಂಗಳವಾರ ಆರಂಭಗೊಂಡಿದ್ದು, ಶುಕ್ರವಾರ ಸಂಜೆ 5 ಗಂಟೆಗೆ ನೆಡೆಯಲಿರುವ ಸಿಡಿ ಉತ್ಸವ ಬಳಿಕ ಸಮಾಪ್ತಿಗೊಳ್ಳಲಿದೆ. ಹಾಗಾಗಿ ದೇವಿ ದರ್ಶನ ಪಡೆದು ಇಷ್ಟಾರ್ಥ ಸಿದ್ದಿಗಾಗಿ ಹರಿಕೆ ಕಾಣಿಕೆ, ಎಡೆ ಮುಡಿ ಸಮರ್ಪಿಸಲು ಸಾವಿರಾರು ಭಕ್ತರು ಸಿಡಿ ಉತ್ಸವದಲ್ಲಿ ಪಾಲ್ಗೊಳ್ಳಲಿದ್ದಾರೆ.

ಪಟ್ಟಣದ ಕೋಟೆಯ ಹಿರೆಕೆರೆ ಊರಭಾಗಿಲಿನಲ್ಲಿ ನೆಲೆಸಿರುವ ಬಂಡಿಚಿಕ್ಕಮ್ಮ ಜಾತ್ರೋತ್ಸವ ಹಾಗೂ ಸಿಡಿ ಉತ್ಸವಕ್ಕೆ ಸಾವಿರಾರು ವರ್ಷಗಳ ಐತಿಹಾಸವಿದೆ. ಬಹುದಿನಗಳ ಹಿಂದೆ ಪಟ್ಟಣದ ಹೊರಭಾಗದ ಕಾವಲ್‌ನಲ್ಲಿದ್ದ, ಬಂಡಿಚಿಕ್ಕಮ್ಮ ಎನ್ನುವ ಅಜ್ಜಿಯ ವೇಶದ ದೇವಿ, ಗ್ರಾಮದ ರಕ್ಷಣೆ ಬಂದಿರುವ ಸಾಕ್ಷಾತ್ ಪರಮೇಶ್ವರಿ ಎನ್ನುವ ನಂಭಿಕೆ ಜನರಲ್ಲಿ ಅನಾಧಿಕಾಲದಿಂದ ಇದೆ.

ಊರ ಭಾಗಿಲು ರಕ್ಷಣೆ : ಗ್ರಾಮದ ಊರ ಭಾಗಿಲಿನಲ್ಲಿ ನೆಲೆಸಿ ಜನರಿಗೆ ಸತ್ಕಾರ್ಯಗಳನ್ನು ಕೈಗೊಂಡ ದೈವಿ ಸ್ವರೂಪಿನಿ ಬಂಡಿ ಚಿಕ್ಕಮ್ಮ. ಗ್ರಾಮಕ್ಕೆ ಕಷ್ಟ ಬಂದಾಗ ಇಂದಿಗೂ ಸಾಕಷ್ಟು ಪವಾಡಗಳಿ ಗ್ರಾಮವನ್ನು ರಕ್ಷಣೆ ಮಾಡುತ್ತಾಳೆ. ಗ್ರಾಮದಲ್ಲಿ ಮಳೆ ಇಲ್ಲದಾಗ, ರೋಗರುಜೀನಿಗಳು ಬಂದಾಗ, ಗ್ರಾಮದ ಸಂಕಷ್ಟ ಕಾಲದಲ್ಲಿ ದೇವಿ ಸ್ಮರಣೆಯಿಂದ ಶುಭವಾಗುತ್ತವೆ. ಗ್ರಾಮಕ್ಕೆ ಪ್ರವೇಶಿಸುವ ದುಷ್ಟ ಶಕ್ತಿಗಳನ್ನು ಮಟ್ಟ ಹಾಕುವ ದೇವಿ ಚಿಕ್ಕಮ್ಮ ಎನ್ನುವ ನಂಭಿಕೆ ಜನರಲ್ಲಿ ಗಾಡವಾಗಿದೆ.

ನಿತ್ಯ ಉತ್ಸವ : ಮಂಗಳವಾರ ಆರಂಭಗೊಂಡ ಜಾತ್ರೋತ್ಸವದ ಅಂಗವಾಗಿ ಪಟ್ಟಣದ ರಾಜಬೀದಿಗಳಲ್ಲಿ ನಿತ್ಯವು ಹೂವಿನ ಪಲ್ಲಕ್ಕಿ ಉತ್ಸವ ನಡೆಸಲಾಗುತ್ತಿದೆ. ಸಿಡಿ ಉತ್ಸವದ ಅಂಗವಾಗಿ ಶುಕ್ರವಾರ ಮುಂಜಾನೆ ಯಿಂದ ಎತ್ತಿಗಾಡಿ ಉಚ್ಚಾಯ ರಥ ಊರಲ್ಲಿ ಸಂಚರಿಸಲಿದೆ. ರೈತರು ಎತ್ತುಗಳನ್ನು ಶೃಂಗರಿಸಿ ರಥಕ್ಕೆ ಹೂಡುತ್ತಾರೆ.

ಸಂಜೆ ವೇಣುಗೋಪಾಲಸ್ವಾಮಿ ದೇವಸ್ಥಾನದಿಂದ ಸಿಡಿ ಮರ ಹೊತ್ತು ತರುವ ಭಕ್ತರು, ಸಿಡಿ ಉತ್ಸವಕ್ಕೆ ಬೇಕಾದ ಸಿದ್ಧತೆ ಕೈಗೊಂಡು ಸಿಡಿ ಮರಕ್ಕೆ ಎಣ್ಣೆ, ಬೆಣ್ಣೆ, ಹರಿಸಿಣ ಸಿಂದೂರದಲ್ಲಿ ಶೃಂಗರಿಸಿ, ಬಾಳೆ ತೆಂಗಿನ ಕಾಯಿಗಳನ್ನು ಕಟ್ಟಿ ಸಿಡಿ ಮರವನ್ನು ಸಿಡಿ ಉತ್ಸವಕ್ಕೆ ಸಿದ್ದಪಡಿಸಿ ಪೂಜೆ ಸಲ್ಲಿಸಿ, ಮಹಾಪ್ರಸಾದ ಪೂಜೆ, ಧ್ವಜಾ ಪೂಜೆ, ಸಿಡಿ ಕಂಬ ಪೂಜೆ ನಡೆಯಲಿದೆ.

ಬಳಿಕ ಪಟ್ಟಣ ದುರ್ಗಮ್ಮ ದೇವಸ್ಥಾನದ ಕರಿಬಾನಿ ಗಂಗೆ ಕುಂಭ ತಂದು ಸಿಡಿ ಕಂಬಕ್ಕೆ ಕಟ್ಟಿ ಪೂಜೆ ಸಲ್ಲಿಸಿ, ಬಂಡಿಚಿಕ್ಕಮ್ಮ ದೇವಿ ಪಲ್ಲಕ್ಕಿ ಜತೆ ಸಿಡಿ ಉತ್ಸವ ಕೈಗೊಳ್ಳಲಾಗುತ್ತದೆ. ಸಾವಿರಾರು ಭಕ್ತರು ಸಿಡಿ ಉತ್ಸವದಲ್ಲಿ ಪಾಲ್ಗೊಂಡು ದೇವಿಯ ದರ್ಶನ ಪಡೆದು ಹರಿಕೆ ಕಾಣಿಕೆ ಸಲ್ಲಿಸುವರು.

ಜಾತೋತ್ಸವ ಹಾಗೂ ಸಿಡಿ ಉತ್ಸವಕ್ಕೆ ದೇವಸ್ಥಾನ ಸಮಿತಿ ಬರದ ಸಿದ್ಧತೆ ಕೈಗೊಂಡಿದೆ. ಕೋಟಿ ರಸ್ತೆಗಳನ್ನು ವಿದ್ಯುತ್ ದೀಪಾಲಂಕರಗಳಿಂದ ಶೃಂಗರಿಸಿದೆ. ಗುರುವಾರ ಭಕ್ತರಿಗೆ ಪ್ರಸಾದ ವ್ಯವಸ್ಥೆ ಕೈಗೊಳ್ಳಲಾಗಿತ್ತು.

## ಫಾಸ್ಟ್ ನ್ಯೂಸ್

### ಪ್ರಥಮ ಪಿ.ಯು.ಸಿ ಪಿ.ಸಿ.ಎಂ.ಬಿ ವಿಷಯಗಳಿಗೆ ದಾಖಲಾತಿ ಪಡೆಯಲು ಅರ್ಜಿ ಆಹ್ವಾನ

» **ದಾವಣಗೆರೆ**

ದಾವಣಗೆರೆ ಜಿಲ್ಲೆಯಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಪ್ರಸಕ್ತ ಸಾಲಿಗೆ ಡಾ.ಎ.ಪಿ.ಜೆ. ಅಬ್ದುಲ್ ಕಲಾಂ ಪದವಿ ಪೂರ್ವ ಕಾಲೇಜು ಮತ್ತು ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ಪದವಿ ಪೂರ್ವ ಕಾಲೇಜು ಹಾಗೂ ಮೌಲಾನಾ ಆಜಾದ್ ಪದವಿ ಪೂರ್ವ ಕಾಲೇಜುಗಳಲ್ಲಿ ಪ್ರಥಮ ಪಿ.ಯು.ಸಿ ಪಿ.ಸಿ.ಎಂ.ಬಿ(ವಿಜ್ಞಾನ ವಿಭಾಗ) ವಿಷಯಗಳಿಗೆ ದಾಖಲಾತಿ ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ.

ಈ ವಸತಿ ಕಾಲೇಜು ವಿದ್ಯಾರ್ಥಿಗಳಿಗೆ ಉಚಿತವಾಗಿ ಊಟ, ವಸತಿ, ಸಮವಸ್ತ್ರ, ಪಠ್ಯಪುಸ್ತಕ ಹಾಗೂ ಇನ್ನಿತರೆ ಸಾಮಗ್ರಿಗಳನ್ನು ನೀಡುವುದರ ಜೊತೆಗೆ ಉತ್ತಮವಾದ ವಿದ್ಯಾಭ್ಯಾಸ ನೀಡಲಾಗುವುದು. ಈ ಕಾಲೇಜುಗಳಲ್ಲಿ ಅಲ್ಪಸಂಖ್ಯಾತ ವರ್ಗದ ಮುಸ್ಲಿಂ,ಕ್ರಿಶ್ಚಿಯನ್,ಜೈನ್,ಸಿಖ್, ಬೌದ್ಧ,ಪಾರ್ಸಿ ವಿದ್ಯಾರ್ಥಿಗಳಿಗೆ ಶೇ.75% ರಷ್ಟು ಮತ್ತು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಇತರೆ ಹಿಂದುಳಿದ ವರ್ಗದ ವಿದ್ಯಾರ್ಥಿಗಳಿಗೆ ಶೇ.25%ರಷ್ಟು ಪ್ರವೇಶ ಲಭ್ಯವಿದೆ. ಅಲ್ಪಸಂಖ್ಯಾತರ ವಿದ್ಯಾರ್ಥಿಗಳ ದಾಖಲಾತಿಗಾಗಿ ಪೋಷಕರ ಆದಾಯ ಮಿತಿ ರೂ.2.50 ಲಕ್ಷಗಳಿಗೆ ಮೀರಬಾರದು. ಅಭ್ಯರ್ಥಿಗಳು ಮೇ.17 ರೊಳಗಾಗಿ ಸೇವಾ ಸಿಂಧು ಪೋರ್ಟಲ್ Website: https://sevasindhu services.karnataka.gov.in ನಲ್ಲಿ ಆ□□ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಬಹುದಾಗಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ದಾವಣಗೆರೆ ದೂರವಾಣಿ ಸಂ:08192-250022, ಡಾ.ಎ.ಪಿ.ಜೆ. ಅಬ್ದುಲ್ ಕಲಾಂ ಪದವಿ ಪೂರ್ವ ಕಾಲೇಜು, ಕೊಂಡಜ್ಜಿ, ಹರಿಹರ ತಾ॥ ಮೊ:9008815296, ಅಲ್ಪಸಂಖ್ಯಾತರ ಮೊರಾರ್ಜಿದೇಸಾಯಿ ಬಾಲಕಿಯರ ವಸತಿ ಶಾಲೆ, ಹೊಸ ಕುಂದುವಾಡ ಗ್ರಾಮ, ಎನ್.ಹೆಚ್-13 ರಸ್ತೆ, ದಾವಣಗೆರೆ. ಮೊ:9916828601, ಅಲ್ಪಸಂಖ್ಯಾತರ ಮೊರಾರ್ಜಿದೇಸಾಯಿ ವಸತಿ ಕಾಲೇಜು ಕೆರೆಬಿಳಚಿ, ಚನ್ನಗಿರಿ ತಾ॥ ಮೊ:9483075634, ಅಲ್ಪಸಂಖ್ಯಾತರ ಮೌಲಾನಾ ಆಜಾದ್ ಪದವಿ ಪೂರ್ವ ಕಾಲೇಜು ಬೀಡಿ ಲೇಔಟ್, ದಾವಣಗೆರೆ. ಮೊ:7022234663 ಸಂಪರ್ಕಿಸಲು ಇಲಾಖೆಯ ಅಧಿಕಾರಿ ಭಕ್ತ ಮಾರ್ಕಂಡೇಯ ತಿಳಿಸಿದ್ದಾರೆ.

### ಪ್ರಥಮ ಪಿಯುಸಿ ತರಗತಿ ಪ್ರವೇಶಕ್ಕಾಗಿ ಅರ್ಜಿ

» **ದಾವಣಗೆರೆ**

ದಾವಣಗೆರೆ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮೊರಾರ್ಜಿ ದೇಸಾಯಿ ಪದವಿ ಪೂರ್ವ ವಸತಿ ಕಾಲೇಜುಗಳಲ್ಲಿ ಪ್ರಸಕ್ತ ಸಾಲಿಗೆ ಪ್ರಥಮ ಪಿಯುಸಿ ತರಗತಿ ಪ್ರವೇಶಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ. ಪೂರ್ವ ವಿಜ್ಞಾನ ವಸತಿ ಕಾಲೇಜುಗಳು ಪ್ರಥಮ ಪಿಯುಸಿ ವಿಜ್ಞಾನ ವಿಭಾಗದ ಪಿಸಿಎಂಬಿ ಮತ್ತು ಪಿಸಿಎಂಸಿ ಸಂಯೋಜನೆಗಳೊಂದಿಗೆ ಕಾರ್ಯನಿರ್ವಹಿಸುತ್ತಿದೆ. ಈ ಕಾಲೇಜುಗಳಲ್ಲಿ ವ್ಯಾಸಂಗ ಮಾಡುವ ವಿದ್ಯಾರ್ಥಿಗಳಿಗೆ ಉಚಿತವಾಗಿ ಊಟ, ವಸತಿ, ಸಮವಸ್ತ್ರ, ಪಠ್ಯಪುಸ್ತಕ ಹಾಗೂ ಇನ್ನಿತರೆ ಮೂಲಭೂತ ಸೌಲಭ್ಯಗಳನ್ನು ನೀಡಲಾಗುವುದು. 2024-2025ನೇ ಶೈಕ್ಷಣಿಕ ಸಾಲಿನಲ್ಲಿ ಎಸ್.ಎಸ್.ಎಲ್.ಸಿ ತರಗತಿಗಳಲ್ಲಿ ವ್ಯಾಸಂಗ ಮಾಡಿರುವ ಮೊರಾರ್ಜಿ ದೇಸಾಯಿ ಕಿತ್ತೂರು ರಾಣಿ ಚೆನ್ನಮ್ಮ, ಏಕಲವ್ಯ ಮಾದರಿ, ಆಟಲ್ ಬಿಹಾರಿ ವಾಜಪೇಯಿ ವಸತಿ ಶಾಲೆಗಳಲ್ಲಿ ಯಾವುದೇ ಶಾಲೆಯ ವಿದ್ಯಾರ್ಥಿಗಳು ಮತ್ತು ಈ ಹಿಂದೆ ಪಾಸು ಮಾಡಿರುವ ವಿದ್ಯಾರ್ಥಿಗಳು ಪ್ರಥಮ ಪಿಯುಸಿ ತರಗತಿ ದಾಖಾಲಾತಿಗೆ ಅರ್ಜಿ ಸಲ್ಲಿಸಬಹುದು. ಎಸ್.ಎಸ್.ಎಲ್.ಸಿ ಅಂಕಗಳ ಮತ್ತು ಮೀಸಲಾತಿ ಆಧಾರದ ಮೇಲೆ ಅರ್ಹತಾ ಪಟ್ಟಿ ತಯಾರಿಸಿ ಪ್ರವೇಶ ನೀಡಲಾಗುವುದು.

ಮೊರಾರ್ಜಿ ದೇಸಾಯಿ ವಸತಿಯುತ ಶಾಲೆ & ವಿಜ್ಞಾನ ಪದವಿ ಪೂರ್ವ ಕಾಲೇಜು ಕಾರಿಗನೂರು, (ಪ್ರಜಾ-91) ಚನ್ನಗಿರಿ ತಾ, ದಾವಣಗೆರೆ, ಮೊರಾರ್ಜಿ ದೇಸಾಯಿ ವಸತಿಯುತ ವಿಜ್ಞಾನ ಪದವಿ ಪೂರ್ವ ಕಾಲೇಜು ಅವರಗೊಳ್ಳ, (ಪ.ಜಾ-) ತಾಃ ದಾವಣಗೆರೆ ಇಲ್ಲಿ www.kreis.kar.nic.in ಆನ್ ಲೈನ್ ಮೂಲಕ ಅರ್ಜಿಯನ್ನು ಪಡೆದು ಮೇ.17 ರೊಳಗಾಗಿ ಕಚೇರಿಗೆ ಸಲ್ಲಿಸಬೇಕು ಎಂದು ಇಲಾಖೆಯ ಅಧಿಕಾರಿ ತಿಳಿಸಿದ್ದಾರೆ.

### ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಪರೀಕ್ಷೆ ಬರೆಯಲು ಅವಕಾಶ

» **ಚಿತ್ರದುರ್ಗ**

2025ರ ಎಸ್‌ಎಸ್‌ಎಲ್‌ಸಿ ಪರೀಕ್ಷೆ-01 ರಲ್ಲಿ ಉತ್ತೀರ್ಣರಾಗದ ವಿದ್ಯಾರ್ಥಿಗಳಿಗೆ ಪರೀಕ್ಷೆ-02 ನ್ನು ಇದೇ ಮೇ.26 ರಿಂದ ಜೂನ್ 02 ರವರೆಗೆ ನಡೆಸಲಾಗುತ್ತಿದೆ. ಪ್ರಪ್ರಥಮ ಬಾರಿಗೆ ಪರೀಕ್ಷೆ ನೊಂದಣಿಯಾಗುವ ವಿದ್ಯಾರ್ಥಿಗಳಿಗೆ ಶುಲ್ಕ ಪಾವತಿಯಿಂದ ವಿನಾಯಿತಿ ನೀಡಲಾಗಿದೆ. ಪರೀಕ್ಷೆಗೆ ನೋಂದಾಯಿಸಿಕೊಳ್ಳಲು ಅಂತಿಮ ಮೇ.10 ಕೊನೆಯ ದಿನವಾಗಿದ್ದು, ಜಿಲ್ಲೆಯಲ್ಲಿ ಅನುತ್ತೀರ್ಣಗೊಂಡಿರುವ 13,579 ವಿದ್ಯಾರ್ಥಿಗಳು ಪರೀಕ್ಷೆಗೆ ನೋಂದಾಯಿಸಿಕೊಳ್ಳುವುದು.

# ಮಲೀನ ತೊಳೆದು, ಸೌಹಾರ್ದತೆಯಿಂದ ಬಾಳಿ

## ದೊಡ್ಡಘಟ್ಟ ಗ್ರಾಮದಲ್ಲಿ ಬಸವ ಮತ್ತು ಅಂಬೇಡ್ಕರ್ ಜಯಂತಿ ಆಯೋಜನೆ; ಮಾದರ ಚನ್ನಯ್ಯ ಸ್ವಾಮೀಜಿ ಸಲಹೆ

» **ಹೊಸದುರ್ಗ**

ಬಸವಣ್ಣ ಮತ್ತು ಅಂಬೇಡ್ಕರ್ ಇಬ್ಬರೂ ಕೂಡ ಸಮಾಜದಲ್ಲಿ ಸಮಾನತೆ ತರುವುದಕ್ಕೆ ಶ್ರಮಿಸಿದ ಮಹಾತ್ಮರು. ಇಂತಹ ಆದರ್ಶ ಪುರುಷರ ಅನುಯಾಯಿಗಳಾಗಿರುವ ನೀವುಗಳು ಗ್ರಾಮದಲ್ಲಿ ಜಾತಿಭೇದ ಮರೆತು, ಎಲ್ಲರೂ ಒಂದೇ ಎಂದು ಭಾವಿಸಿ, ಸೌಹಾರ್ದ ಮತ್ತು ಸಾಮರಸ್ಯದಿಂದ ಬಾಳಿ ಎಂದು ಚಿತ್ರದುರ್ಗದ ಶ್ರೀ ಬಸವಮೂರ್ತಿ ಮಾದರ ಚೆನ್ನಯ್ಯ ಸ್ವಾಮೀಜಿ ಸಲಹೆ ನೀಡಿದರು.

ತಾಲೂಕಿನ ದೊಡ್ಡಘಟ್ಟ ಗ್ರಾಮದಲ್ಲಿ ಆಯೋಜಿಸಿದ್ದ ಜಗದ್ಗುರು ಬಸವೇಶ್ವರ ಮತ್ತು ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಜಯಂತಿ ಕಾರ್ಯಕ್ರಮದ ದಿವ್ಯ ಸಾನಿಧ್ಯವಹಿಸಿ ಮಾತನಾಡಿದ ಅವರು, ದೊಡ್ಡಘಟ್ಟ ಗ್ರಾಮ ಒಂದು ಸಣ್ಣ ವಿಷಯಕ್ಕೆ 3 ವರ್ಷಗಳಿಂದಲೂ ರಿಸರ್ವ್ ಪೊಲೀಸ್ ಕಾವಲಿನಲ್ಲಿತ್ತು ಎಂಬ ವಿಷಯ ಕೇಳಿದ್ದೆ. ಇದೀಗ, ಗ್ರಾಮದ 2 ಕಡೆಯ ಜನರು ಉಭಯ ಶ್ರೀಗಳ ಸಮ್ಮುಖದಲ್ಲಿ



ಸೌಹಾರ್ದತೆ ಮತ್ತು ಸಹಬಾಳ್ವೆಯಿಂದ ಒಂದುಗೂಡಿ ಕಾರ್ಯಕ್ರಮ ಆಯೋಜಿಸಿರುವುದನ್ನು ನೋಡಿ, ನಮಗೆ ಬಹಳ ಸಂತಸವಾಗಿದೆ. ಗ್ರಾಮದಲ್ಲಿ ಮುಂದೆ ಕಹಿ ವಾತಾವರಣ ನಿರ್ಮಾಣವಾಗದಂತೆ ಸಾಮರಸ್ಯದಿಂದ ಬದುಕಿಯೆಂದು ಹೇಳಿದರು.

ಶಾಸಕ ಬಿ.ಜಿ.ಗೋವಿಂದಪ್ಪ ಮಾತನಾಡಿ, ಬುದ್ಧ, ಬಸವ, ಅಂಬೇಡ್ಕರ್, ವಾಲ್ಮೀಕಿ, ಕನಕದಾಸರ ತತ್ವ-ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಂಡರೆ, ನಮ್ಮಲ್ಲಿ ಪ್ರತಿಷ್ಠೆ ಮತ್ತು ಪ್ರತಿಕಾರಗಳು ಇರುವುದಿಲ್ಲ. ನಾವು-ನೀವೆಲ್ಲರೂ ಅಭಿವೃದ್ಧಿಯ ದೇಶ ಕಟ್ಟಲು ವೈಮನಸುಗಳನ್ನು ಬಿಟ್ಟು, ಅಣ್ಣ-ತಮ್ಮಂದಿರಂತೆ ಬದುಕಬೇಕು ಎಂದು ಕಿವಿ ಮಾತು ಹೇಳಿದರು.

ವಿಧಾನ ಪರಿಷತ್ ಸದಸ್ಯ ಕೆ.ಎಸ್.ನವೀನ್ ಮಾತನಾಡಿ, ಸೌಹಾರ್ದ ಹಾಳು ಮಾಡುವ ರಾಜಕಾರಣಿಗಳಿಗೆ ನಮ್ಮ ಗ್ರಾಮಕ್ಕೆ ಬರುವ ಅವಕಾಶವಿಲ್ಲವೆಂದು ಜನಗಳು ತೀರ್ಮಾನಿಸಿದರೆ, ಯಾವ ಊರಲ್ಲೂ ಗದ್ದಲ ಬರುವುದಿಲ್ಲ, ಜಾತಿ-ಜಾತಿಗಳ ಮಧ್ಯೆ ಸಂಘರ್ಷ ಬರುವುದಿಲ್ಲ. ನೀವು ಒಗ್ಗಟ್ಟಾಗಿದ್ದಾಗ ರಾಜಕಾರಣಿಗಳು ನಿಮ್ಮನ್ನು ಹೊಡೆದಾಳುವ ಅವಕಾಶ ತಪ್ಪುತ್ತದೆ ಎಂದು ತಿಳಿಸಿದರು.

ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಕುಂಚಿಟಿಗ ಮಠದ ಪೀಠಾಧ್ಯಕ್ಷರಾದ ಶಾಂತವೀರ ಸ್ವಾಮೀಜಿ ವಹಿಸಿದ್ದರು. ವೇದಿಕೆಯಲ್ಲಿ ಸರ್ಕಲ್ ಇನ್ಸ್ಪೆಕ್ಟರ್ ರಮೇಶ್ ಗೌಡ, ಸಾಹಿತಿ ಮಾಗೋಡಿ ಮಂಜುನಾಥ್, ಜಿಲ್ಲಾ ಪಂಚಾಯತಿ ಮಾಜಿ ಸದಸ್ಯರಾದ ಬಿ.ಎಸ್. ದ್ಯಾಮಪ್ಪ, ಎಂ.ಲಕ್ಷ್ಮಣ್ ಮತ್ತು ಗ್ರಾಮದ ಮುಖಂಡ ಪಾಂಡುರಂಗಪ್ಪ ಸೇರಿದಂತೆ ಗ್ರಾ.ಪಂ. ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು ಹಾಗೂ ಸುತ್ತಮುತ್ತಲಿನ ಗ್ರಾಮಸ್ಥರು ಭಾಗವಹಿಸಿದ್ದರು.

# ಭ್ರಷ್ಟ ವ್ಯಕ್ತಿಗಳಿಂದ ಹೆಚ್‌ಕೆಆರ್ ವ್ಯಕ್ತಿತ್ವಕ್ಕೆ ಮಸಿ


» **ದಾವಣಗೆರೆ**

ಹೆಚ್.ಕೆ.ರಾಮಚಂದ್ರಪ್ಪ ಯಾವುದೇ ಒಬ್ಬ ವ್ಯಕ್ತಿಯ ಸ್ವತ್ತಲ್ಲ. ಅವರು ಕಮ್ಯುನಿಷ್ಟ ಪಕ್ಷ ಮತ್ತು ಎಐಟಿಯುಸಿಯ ಸ್ವತ್ತು. ಯಾರದೋ ಕೆಲವರ ನಾಯಕರಲ್ಲ. ಸದಾ ಜನಪರ ಕೆಲಸ ಮಾಡುತ್ತಾ ಜವರ ನಾಡಿ ಮಿಡಿತಕ್ಕೆ ತಕ್ಕಂತೆ ಸಿಪಿಐ ಪಕ್ಷದ ಆಶಯದಂತೆ ಕೆಲಸ ಮಾಡಿ ಜನಪ್ರಿಯತೆ ಪಡೆದವರು ಎಂದು ಎಐಟಿಯುಸಿ ಜಿಲ್ಲಾ ಸಮಿತಿಯ ಪ್ರಧಾನ ಕಾರ್ಯದರ್ಶಿ ಆವರಗೆರೆ. ಹೆಚ್.ಜಿ ಉಮೇಶ್ ಹೇಳಿದರು.

ನಗರದ ಅಶೋಕ ರಸ್ತೆಯಲ್ಲಿರುವ ಕಾಂ.ಪಂಪಾಪತಿ ಭವನದಲ್ಲಿ ಭಾರತ ಕಮ್ಯುನಿಸ್ಟ್ ಪಕ್ಷ ಮತ್ತು ಎಐಟಿಯುಸಿ ಜಿಲ್ಲಾ ಮಂಡಳಿ ವತಿಯಿಂದ ಆಯೋಜಿಸಲಾಗಿದ್ದ ಹಿರಿಯ ಕಾರ್ಮಿಕ ಮುಖಂಡ ದಿ.ಕಾಂ.ಹೆಚ್.ಕೆ ರಾಮಚಂದ್ರಪ್ಪ ಅವರ 4ನೇ ವರ್ಷದ ಸ್ಮರಣೆ ಕಾರ್ಯಕ್ರಮದಲ್ಲಿ ಪ್ರಸ್ತಾವಿಕವಾಗಿ ಮಾತನಾಡಿದರು.

ಆಡು ಮುಟ್ಟದ ಸೊಪ್ಪಿಲ್ಲ ಎನ್ನುವ ಹಾಗೆ ಹೆಚ್‌ಕೆಆರ್ ಜನರ ಎಂತಹ ಸಮಸ್ಯೆ ಇರಲಿ ತಾವೇ ಮೊದಲಿಗರಾಗಿ ನಿಂತು ಬಗೆಹರಿಸುತ್ತಿದ್ದರು. ಇಂತಹ ವ್ಯಕ್ತಿಯ ಹೆಸರನ್ನು ಕೆಲ ಭ್ರಷ್ಟ ವ್ಯಕ್ತಿಗಳು ದುರ್ಬಳಕೆ ಮಾಡಿಕೊಂಡು ಅವರ ಹೆಸರಿಗೆ ಮಸಿ ಬಳಿಯುವ ಕುತಂತ್ರ ಮಾಡುತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತ ಪಡಿಸಿದರು.

ಹೆಚ್‌ಕೆಆರ್ ವ್ಯಕ್ತಿತ್ವ ಕೆಡಿಸಲು ಕೆಲವರು ನಡೆಸುವ ಹುನ್ನಾರಗಳು ಹೆಚ್ಚು ದಿನ ನಡೆಯುವುದಿಲ್ಲ. ಎಲ್ಲಾ ವರ್ಗದ ಯುವಕರನ್ನು ತಮ್ಮೊಟ್ಟಿಗೆ



ಇಟ್ಟುಕೊಂಡು ಸಾಮಾಜಿಕ ನ್ಯಾಯಕ್ಕಾಗಿ ದುಡಿದ ವ್ಯಕ್ತಿ. ನುಡಿದಂತೆ ನಡೆಯುತ್ತಿದ್ದರು. ಸದಾ ಜನರೊಂದಿಗೆ ಬೆರೆಯುತ್ತಾ ತುಳಿತಕ್ಕೆ ಒಳಗಾದ ಎಲ್ಲಾ ವರ್ಗದ ಪರವಾಗಿ ಕೆಲಸ ಮಾಡಿವ ವ್ಯಕ್ತಿ ಸದಾ ಸ್ಮರಣೀಯರು ಎಂದರು.

ಕನ್ನಡ ಚಳುವಳಿ ಹಿರಿಯ ಹೋರಾಟಗಾರ ಬಂಕಾಪುರ ಚನ್ನಬಸಪ್ಪ ಮಾತನಾಡಿ, ಜಗಜ್ಯೋತಿ ಬಸವಣ್ಣನವರ ನುಡಿದಂತೆ ನಡೆಯಬೇಕು ಎನ್ನುವ ಮಾತಿನಂತೆ ಸಿಪಿಐ ಪಕ್ಷ ನುಡಿದಂತೆ ನಡೆದುಕೊಂಡಿದೆ. ಸದಾ ಜನಪರ ಕೆಲಸ ಮಾಡುತ್ತಾ, ಅವರ ಕಷ್ಟ ಕಾರ್ಪಣ್ಯಗಳಿಗೆ ಸ್ಪಂದಿಸಿದೆ. ಜನರಿಗೆ ಸಾಮಾಜಿಕ ನ್ಯಾಯ ಕೊಡಿಸುವಲ್ಲಿ ಹೋರಾಟ ಮಾಡಿದ ಪಕ್ಷ ಸಿಪಿಐ ಎಂದರು.

ಎಐಟಿಯುಸಿ ಜಿಲ್ಲಾ ಸಮಿತಿಯ ಉಪಾಧ್ಯಕ್ಷ ಹೆಚ್.ಕೆ ಕೊಟ್ರಪ್ಪ ಮಾತನಾಡಿ, ಹೆಚ್‌ಕೆಆರ್ ಕೇವಲ ವ್ಯಕ್ತಿಯಾಗಿರಲಿಲ್ಲ. ಅವರೊಂದು ಶಕ್ತಿ ಇದ್ದಂತೆ. ಜನರು ಮೆಚ್ಚುವಂತಹ ಕೆಲಸಗಳನ್ನು ಮಾಡುತ್ತಿದ್ದರು. ಪಕ್ಷ ಕಟ್ಟುವ ಜೊತೆ ಪಕ್ಷಕ್ಕೆ ಆಸ್ತಿ ಮಾಡಿದರು. ಮಾತ್ರವಲ್ಲ ಪಕ್ಷಕ್ಕಾಗಿ ದುಡಿದ ವ್ಯಕ್ತಿಗಳ ಹೆಸರನ್ನು ಪಕ್ಷದ ಆಸ್ತಿಗಳಿಗೆ ನಾಮಕರಣ ಮಾಡಿದರು. ಅವರು ಇವತ್ತು ನಮ್ಮೊಂದಿಗಿಲ್ಲ. ಆದರೆ ಅವರ ಮಾರ್ಗದರ್ಶನದಲ್ಲಿ ನಾವೆಲ್ಲರೂ ಸಾಗೋಣ. ಅವರು ಹಾಕಿಕೊಟ್ಟ ದಾರಿಯಲ್ಲಿ ನಡೆದು ಆಶಯಗಳನ್ನು ಈಡೇರಿಸುವ ನಿಟ್ಟಿನಲ್ಲಿ ಕೆಲಸ ಮಾಡಬೇಕಿದೆ ಎಂದು ಆಶಯ ವ್ಯಕ್ತ ಪಡಿಸಿದರು.

ಅಧ್ಯಕ್ಷತೆಯನ್ನು ಸಿಪಿಐ ಜಿಲ್ಲಾ ಮಂಡಳಿಯ ಕಾರ್ಯದರ್ಶಿ ಆವರಗೆರೆ ಚಂದ್ರು ವಹಿಸಿದ್ದರು. ಈ ವೇಳೆ ಸಿಪಿಐ ಜಿಲ್ಲಾ ಮಂಡಳಿಯ ಖಜಾಂಚಿ ಮಹಮ್ಮದ್ ರಫೀಕ್, ಜಿ.ಯಲ್ಲಪ್ಪ, ಭಾಷಾ ಜಗಲೂರು, ಟಿ.ಎಚ್.ನಾಗರಾಜ್ ಹರಿಹರ, ಜೈನುಲ್ಲಾಖಾನ್ ಚನ್ನಗಿರಿ, ನಿಟುವಳ್ಳಿ ಬಸವರಾಜ್, ಕೆ.ಜಿ. ಶಿವಮೂರ್ತಿ ಇದ್ದರು.

## ದುರ್ಬಲ ವರ್ಗದವರಿಗೆ ಉಚಿತ ಕಾನೂನು ಅರಿವು ಕಾರ್ಯಕ್ರಮವಿದೆ ಇದರ ಸದುಪಯೋಗ ಪಡೆದುಕೊಳ್ಳಿ



» **ಹೊಸದುರ್ಗ**

ಮಹಿಳೆಯರು, ಮಕ್ಕಳು, ಕಾರ್ಮಿಕರು, ಪ.ಜಾತಿ, ಪ.ಪಂಗಡ, ವಾರ್ಷಿಕ □ 3 ಲಕ್ಷ ಆದಾಯದೊಳಗಿನವರಿಗೆ ಉಚಿತ ಕಾನೂನು ಅರಿವು ಕಾರ್ಯಕ್ರಮವಿದೆ. ಇದರ ಸದುಪಯೋಗ ಪಡೆದುಕೊಂಡು, ಕಾನೂನು ಅರಿವು ಪಡೆಯಿರಿ ಎಂದು ಪ್ರಧಾನ ಸಿವಿಲ್ ನ್ಯಾಯಾಧೀಶರಾದ ಪ್ರಸನ್ನಕುಮಾರ್ ಸಿ ತಿಳಿಸಿದರು.ತಾಲ್ಲೂಕು ಕಾನೂನು ಸೇವಾ ಸಮಿತಿ, ವಕೀಲರ ಸಂಘ, ಕಾರ್ಮಿಕ ಇಲಾಖೆ, ಅರಣ್ಯ ಇಲಾಖೆ, ದಿ ರಾಮ್ಕೊ ಸಿಮೆಂಟ್ ಮತ್ತೋಡು ಘಟಕದ ವತಿಯಿಂದ ಮತ್ತೋಡಿನ ದಿ ರಾಮ್ಕೋ ಸಿಮೆಂಟ್ ಲಿ ಆವರಣದಲ್ಲಿ ಆಯೋಜಿಸಿದ್ದ 'ವಿಶ್ವಭೂಮಿ ಮತ್ತು ಕಾರ್ಮಿಕರ ದಿನಾಚರಣೆ ' ಅಂಗವಾಗಿ ಕಾನೂನು ಅರಿವು ನೆರವು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

1989 ರಲ್ಲಿ ದುರ್ಬಲ ವರ್ಗದವರಿಗೆ ಉಚಿತ ಕಾನೂನು ಅರಿವು ಕಾರ್ಯಕ್ರಮದ ಜಾರಿಗೆ ಬಂದಿದೆ, ತಾಲ್ಲೂಕು, ರಾಜ್ಯ, ರಾಷ್ಟ್ರೀಯ ಮಟ್ಟದಲ್ಲಿ ಕಾನೂನು ಸೇವಾ ಸಮಿತಿ ಇದೆ. ನುರಿತ ಪ್ಯಾನಲ್ ವಕೀಲರುಗಳಿದ್ದು, ಉಚಿತವಾಗಿ ಕಾನೂನು ಅರಿವು ಮೂಡಿಸುವರು. ಸಮಾಜದ ಕೊನೆ ವ್ಯಕ್ತಿಗೂ ಕೂಡ ಕಾನೂನಿನ ಅರಿವು ಹೊಂದುವುದು ಅಗತ್ಯ ಹಾಗಾಗಿ ಈ ಕಾನೂನು ಸೇವಾ ಸಮಿತಿ ರಚಿಸಲಾಗಿದೆ ಎಂದರು.ಕಾರ್ಮಿಕರು ಇಲಾಖೆ ಹಾಗೂ ಸರ್ಕಾರದ ವತಿಯಿಂದ ನೀಡಲಾಗುವ ಸೌಲಭ್ಯಗಳನ್ನು ಪಡೆದುಕೊಳ್ಳಿ, ಕಾನೂನಿನ ಸೌಲಭ್ಯದಿಂದ ವಂಚಿರಾಗಬೇಡಿ. ಮದ್ಯಪಾನ ಸೇವಿಸಿ ವಾಹನ ಚಲಾಯಿಸುವುದು ಅಪರಾಧ ಈ ಕೃತ್ಯ ಯಾರೂ ಮಾಡಬಾರದು. ಕಾನೂನನ್ನು ಗೌರವಿಸಿ, ಅದರಂತೆ ನಡೆಯಿರಿ ಎಂದು ಪ್ರಧಾನ ಸಿವಿಲ್ ನ್ಯಾಯಾಧೀಶರಾದ ಪ್ರಸನ್ನಕುಮಾರ್ ಸಿ ಸಲಹೆ ನೀಡಿದರು. ದಿ ರಾಮ್ಕೋ ಸಿಮೆಂಟ್ ನ ತಾಂತ್ರಿಕ ಮುಖ್ಯಸ್ಥ ವಿಘ್ನೇಶ್ ಎಂ. ಅಧ್ಯಕ್ಷತೆ ವಹಿಸಿದ್ದರು. ವಕೀಲರ ಸಂಘದ ಅಧ್ಯಕ್ಷ ರವಿಕುಮಾರ್, ಉಪಾಧ್ಯಕ್ಷ ಜಗದೀಶ್ ನಾಯ್ಕ್, ಕಾರ್ಯದರ್ಶಿ ಇ.ಟಿ. ರಮೇಶ್, ವಕೀಲರಾದ ಡಿ. ನಿರಂಜನ ಮೂರ್ತಿ, ತಾಲ್ಲೂಕು ಕಾರ್ಮಿಕ ಅಧಿಕಾರಿ ರಾಜಣ್ಣ, ಎ, ಪ್ಯಾನಲ್ ವಕೀಲರಾದ ಈರಬಸಪ್ಪ, ಸಿಬ್ಬಂದಿಗಳಾದ ಪ್ರಶಾಂತ್, ವೇಣುಗೋಪಾಲ್ ಸೇರಿದಂತೆ ಸಿಬ್ಬಂದಿಗಳು ಹಾಗೂ ಕಾರ್ಮಿಕರಿದ್ದರು.

# ಶಕ್ತಿ ದೇವತೆ ಕಾಶಿಭಾಗೀರಥಿ ದೇವಿಯ ಅದ್ದೂರಿ ರಥೋತ್ಸವ

» **ಹೊಸದುರ್ಗ**

ತಾಲ್ಲೂಕಿನ ಮತ್ತೋಡಿನಲ್ಲಿ ನೆಲೆಸಿರುವ ಶಕ್ತಿದೇವತೆ ಕಾಶಿ ಭಾಗೀರಥಿ ದೇವಿಯ ರಥೋತ್ಸವ ನೂರಾರು ಭಕ್ತರ ಸಮ್ಮುಖದಲ್ಲಿ ಅತ್ಯಂತ ವಿಜೃಂಭಣೆಯಿಂದ ನಡೆಯಿತು.

ರಥೋತ್ಸವದ ಅಂಗವಾಗಿ ಮೇ. 1 ರಂದು ಧ್ವಜಾರೋಹಣ ಮಾಡುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು. ಸಂಜೆ ಮದುವಣಗಿತ್ತಿ ಶಾಸ್ತ್ರ ಹಾಗೂ ಕೊಂಕಣಿ ಧಾರಣೆ ಧಾರ್ಮಿಕ ವಿಧಿಗಳನ್ವಯ ನಡೆಯಿತು. ಗ್ರಾಮಸ್ಥರೆಲ್ಲಾ ದೇವಿಗೆ ಮಡಿಲಕ್ಕಿ ಸಮರ್ಪಿಸಿ, ಭಕ್ತಿ ಮೆರೆದರು.

ಗಂಗಾ ಪೂಜೆ, 101 ಎಡೆ ಪೂಜೆ ನಡೆಯಿತು. ಮೇ. 3 ರಂದು ಕೋಣನ ಉತ್ಸವ, ಮೇ. 4 ರಂದು ಆನೆ ಉತ್ಸವ ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಾಗಿತು. ಉತ್ಸವ ವಿಶೇಷವಾಗಿದ್ದು, ಭಕ್ತರ ಕಣ್ಮನ ಸೆಳೆಯುವಂತಿತ್ತು.




ಮೇ. 06 ರ ಮಂಗಳವಾರದಂದು ನಸುಕಿನಲ್ಲಿ ದೇವಿಯ ರಥವೇರಿತು. ದಕ್ಷಬ್ರಹ್ಮಸ್ವಾಮಿ ರಥೋತ್ಸವಕ್ಕೆ ಚಾಲನೆ ನೀಡಿದ ನಂತರ ರಥ ಎಳೆಯಲಾಯಿತು. ಸಕಲ ವಾದ್ಯಗೋಷ್ಠಿಗಳು ಹಾಗೂ ಭಕ್ತರ ಜಯಘೋಷಗಳ ನಡುವೆ ರಥ ತೇರು ಮನೆಯಿಂದ ಮತ್ತೋಡಿನ ಬಸ್ ನಿಲ್ದಾಣದ ರಸ್ತೆಯ ವರೆಗೂ ಸಾಗಿತು. ಭಕ್ತರು ಬಾಳೆಹಣ್ಣು ಸಮರ್ಪಿಸಿ, ಪ್ರಾರ್ಥಿಸಿದರು. ಮಧ್ಯಾಹ್ನ ಹಾಲು ಪಲ್ಲಕ್ಕಿ ಉತ್ಸವ ನಡೆಯಿತು.

ಬುಧವಾರ ಹೋಕುಳಿ ಹಾಗೂ ಕಂಕಣ ವಿಸರ್ಜನೆ ಮೂಲಕ ರಥೋತ್ಸವ ಕಾರ್ಯಕ್ರಮಗಳಿಗೆ ತೆರೆ ಬೀಳಲಿದೆ. ಗುಡಿ ಗೌಡರು, ದೇವಾಲಯದ ಆಡಳಿತ ಮಂಡಳಿ, ಸುತ್ತಮುತ್ತಲಿನ ಗ್ರಾಮಸ್ಥರು ಹಾಗೂ ನೂರಾರು ಭಕ್ತರು ದೇವಿಯ ದರ್ಶನ ಪಡೆದರು.

ಮತ್ತೋಡಿನ ಸರ್ಕಾರಿ ಆಸ್ಪತ್ರೆ ಮುಂಭಾಗದಿಂದ ಅರೇಹಳ್ಳಿ ಗೇಟ್ ವರೆಗೂ ದೀಪಾಲಂಕಾರ ಮಾಡಲಾಗಿತ್ತು. ಮತ್ತೋಡು ಗ್ರಾಮದಲ್ಲಿ ನೆಲೆಸಿರುವ ಬನಶಂಕರಿದೇವಿ, ಗಣೇಶ, ದೇವಾಲಯಗಳಿಗೂ ಕೂಡ ಆಕರ್ಷಕ ವಿದ್ಯುತ್ ಗ್ರಾಮದ ತುಂಬೆಲ್ಲಾ ಹಬ್ಬದ ವಾತಾವರಣ ಮನೆ ಮಾಡಿತು.

## ನಾಲೆಗಳಿಗೆ ನೀರು ಬಿಡುಗಡೆ

**ದಾವಣಗೆರೆ:** ಭದ್ರಾ ಜಲಾಶಯದ ಅಚ್ಚುಕಟ್ಟುದಾರ ವ್ಯಾಪ್ತಿಯ ಬೆಳೆಗಳು ಕಟಾವಿಗೆ ಬರಲು ಇನ್ನೂ ಹೆಚ್ಚಿನ ಕಾಲಾವಕಾಶ ಬೇಕಾಗಿರುವುದರಿಂದ ರೈತರ ಬೇಡಿಕೆಯಂತೆ ಭದ್ರಾ ಜಲಾಶಯದ ಎಡದಂಡೆ ನಾಲೆಯಲ್ಲಿ ಮೇ.10 ರವರೆಗೆ ಮತ್ತು ಬಲದಂಡೆ ನಾಲೆಯಲ್ಲಿ ಮೇ.18 ರವರೆಗೆ ನೀರು ಹರಿಸುವುದನ್ನು ಮುಂದುವರೆಸಲಾಗುವುದು. ಸಾರ್ವಜನಿಕ ಹಿತದೃಷ್ಟಿಯಿಂದ ಕಾಲುವೆ ಪಾತ್ರಗಳಲ್ಲಿ ಸಾರ್ವಜನಿಕರು ಮತ್ತು ರೈತರು ತಿರುಗಾಡುವುದು, ದನಕರುಗಳನ್ನು ತೊಳೆಯುವುದು ಮತ್ತು ದೈನಂದಿನ ಚಟುವಟಿಕೆ ಮಾಡುವುದನ್ನು ನಿಷೇಧಿಸಲಾಗಿದೆ.

## ಪ್ರಮುಖ ಸುದ್ದಿ

# ಪಪಂ ಪೌರ ಕಾರ್ಮಿಕರ ನೇಮಕಾತಿಯಲ್ಲಿ ಭ್ರಷ್ಟಾಚಾರ

» **ಚಿತ್ರದುರ್ಗ**

ಮೊಳಕಾಲ್ಮುರು ಪಟ್ಟಣ ಪಂಚಾಯಿತಿಯಲ್ಲಿ 2022-23ನೇ ಸಾಲಿನಲ್ಲಿ ಪೌರ ಕಾರ್ಮಿಕರ ನೇಮಕಾತಿಯಲ್ಲಿ ಭ್ರಷ್ಟಾಚಾರ ನಡೆದಿದ್ದು, ಸೂಕ್ತ ತನಿಖೆಗೊಳಪಡಿಸಿ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳುವಂತೆ ಕರ್ನಾಟಕ ದಲಿತ ಸಂಘರ್ಷ ಸಮಿತಿ(ಶೋಷಿತರ) ವಾದದಿಂದ ಅಪರ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಲಾಯಿತು.

ಕೆ.ಎ.ಆಕಾಶ್ ಬಿನ್ ಕೆ.ಎಂ.ಆನಂದ ಇವರು ಮೊಳಕಾಲ್ಮೂರು ಪಟ್ಟಣ ಪಂಚಾಯಿತಿಯ ಅಧ್ಯಕ್ಷರಾಗಿದ್ದ ಲಕ್ಷ್ಮಣರವರ ಸಂಬಂಧಿಯಾಗಿದ್ದು, ಪೌರ ಕಾರ್ಮಿಕರಾಗಿ ಅಕ್ರಮವಾಗಿ ಮೊಳಕಾಲ್ಮುರು ಪಟ್ಟಣ ಪಂಚಾಯಿತಿಯಲ್ಲಿ ನೇಮಕವಾಗಿದ್ದು, ಕೆಲಸ ನಿರ್ವಹಿಸದೆ ಇದ್ದರೂ ಕಿರಿಯ ಆರೋಗ್ಯ ನಿರೀಕ್ಷಕ ಶ್ರೀನಿವಾಸ್ ಹಾಜರಾತಿ ನೀಡಿ ವೇತನ ಪಾವತಿಸಿರುತ್ತಾರೆ. ಜಿ.ಬಿ.ಬಸವರಾಜ್ ಬಿನ್ ಗಿರಿಯಪ್ಪ ಇವರು ಮೊಳಕಾಲ್ಮುರು




ಪಟ್ಟಣ ಪಂಚಾಯಿತಿಯ ಅಂದಿನ ಮುಖ್ಯಾಧಿಕಾರಿಯಾಗಿದ್ದ ಕಾಂತರಾಜ್‌ರವರ ಸಂಬಂಧಿಯಾಗಿದ್ದು, ಇವರು ಸಹ ಅಕ್ರಮವಾಗಿ ಪೌರ ಕಾರ್ಮಿಕರಾಗಿ ಕೆಲಸಕ್ಕೆ ಸೇರ್ಪಡೆಯಾಗಿದ್ದಾರೆ. ಚಿತ್ರದುರ್ಗ ನಿವಾಸಿಯಾಗಿದ್ದು, ಮೊಳಕಾಲ್ಮುರು ಪಟ್ಟಣ ಪಂಚಾಯಿತಿಯಲ್ಲಿ ಪೌರ ಕಾರ್ಮಿಕರಾಗಿ ಕೆಲಸ ನಿರ್ವಹಿಸಿರುವುದಿಲ್ಲ. ಪೌರ ಕಾರ್ಮಿಕರಾಗಿ ಆಯ್ಕೆಯಾಗಿರುವ ಹತ್ತು ಜನರಲ್ಲಿ ಡಿ.ಸಿದ್ದಪ್ಪ, ಎಂ.ಹನುಮಂತಪ್ಪ ಇವರುಗಳನ್ನು ಹೊರತುಪಡಿಸಿದರೆ ಉಳಿದ ಎಂಟು ಪೌರ ಕಾರ್ಮಿಕರು ಯಾವ ಸಾಲಿನಲ್ಲಿ ಗುತ್ತಿಗೆ ಆಧಾರದ ಮೇಲೆ ಸೇರಿರುತ್ತಾರೆ. ಗುತ್ತಿಗೆದಾರರು ಯಾರು? ಯಾವ ಬ್ಯಾಂಕಿನಿಂದ ವೇತನ ಪಾವತಿಸಲಾಗಿದೆ? ನಕಲಿ ದಾಖಲೆಗಳು ಸೃಷ್ಟಿಯಾಗಿದ್ದು, ಕೂಲಂಕುಶ ತನಿಖೆ ನಡೆಸಿದರೆ ಸತ್ಯಾಂಶ ಬಯಲಿಗೆ ಬರುತ್ತದೆ.

ನೇರ ನೇಮಕಾತಿಯಲ್ಲಿ ಅಧಿಕಾರ ದುರುಪಯೋಗಪಡಿಸಿಕೊಂಡಿರುವ ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರು ಹಾಗೂ ಕಚೇರಿ ವ್ಯವಸ್ಥಾಪಕರನ್ನು ಕೂಡಲೆ ಅಮಾನತ್ತುಪಡಿಸುವಂತೆ ಕರ್ನಾಟಕ ದಲಿತ ಸಂಘರ್ಷ ಸಮಿತಿಯ ಜಿಲ್ಲಾಧ್ಯಕ್ಷ ಸಿ.ಹೆಚ್.ಮಂಜುನಾಥ್ ಒತ್ತಾಯಿಸಿದರು.

## ಫಾಸ್ಟ್ ನ್ಯೂಸ್

ಹೊಸದುರ್ಗ ಪಟ್ಟಣದಲ್ಲಿ ಶಿಕ್ಷಕರಿಗೆ ಶಾಸಕ ಬಿ.ಜಿ.ಗೋವಿಂದಪ್ಪ ತರಾಟೆ

## ಅನುದಾನಿತ, ವಸತಿ ಶಾಲೆ ಶಿಕ್ಷಕರಾಗಿರುವ ನೀವು ಸರ್ಕಾರದಿಂದ ಸಂಬಳ ತೆಗೆದುಕೊಳ್ಳುವುದಿಲ್ಲವೇ?



» **ಹೊಸದುರ್ಗ**

2025 ನೇ ಸಾಲಿನ ಎಸ್.ಎಸ್.ಎಲ್.ಸಿ ಪರೀಕ್ಷೆ ಫಲಿತಾಂಶ ಹೊಸದುರ್ಗ ತಾಲೂಕಿನ ಸರ್ಕಾರಿ, ಅನುದಾನಿತ ಮತ್ತು ವಸತಿ ಶಾಲೆಗಳಲ್ಲಿ ಕಳಪೆಯಾಗಿದೆ. ಆದರೆ, ಖಾಸಗಿ ಅನುದಾನ ರಹಿತ ಶಾಲೆಗಳಲ್ಲಿ ಒಳ್ಳೆಯ ಫಲಿತಾಂಶ ಬಂದಿದೆ. ಸರ್ಕಾರಿ, ಅನುದಾನಿತ ಮತ್ತು ವಸತಿ ಶಾಲೆಯ ಶಿಕ್ಷಕರುಗಳಾಗಿರುವ ನೀವುಗಳು ಸರ್ಕಾರದಿಂದ ಸಂಬಳ ತೆಗೆದುಕೊಳ್ಳುವುದಿಲ್ಲವೇ? ಖಾಸಗಿ ಶಾಲೆಗಳಿಗಿಂತ ಫಲಿತಾಂಶ ಕಡಿಮೆ ಬಂದಿರುವುದೇಕೆ? ಅದು ಇದು ಅಂತ ಉಡಾಫೆ ಉತ್ತರಗಳನ್ನು ಕೊಡುವುದು ಬಿಟ್ಟು, ಮಕ್ಕಳಿಗೆ ಉತ್ತಮವಾಗಿ ಪಾಠ ಹೇಳಿಕೊಡಿ. ನಿಮ್ಮ ಉಡಾಫೆ ಮನಸ್ಥಿತಿಯಿಂದಲೇ ಫಲಿತಾಂಶ ಕಳಪೆಯಾಗಿದೆ ಎಂದು ಶಿಕ್ಷಕರನ್ನ ಶಾಸಕ ಬಿ.ಜಿ.ಗೋವಿಂದಪ್ಪ ತರಾಟೆಗೆ ತೆಗೆದುಕೊಂಡರು.

ಪಟ್ಟಣದ ಸರ್ಕಾರಿ ಪದವಿಪೂರ್ವ ಕಾಲೇಜು ಪ್ರೌಢಶಾಲಾ ವಿಭಾಗದಲ್ಲಿ ಗುರುವಾರ ಶಾಲಾ ಶಿಕ್ಷಣ ಇಲಾಖೆ ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿ ಇವರ ವತಿಯಿಂದ ಆಯೋಜಿಸಿದ್ದ 2025 ನೇ ಸಾಲಿನಲ್ಲಿ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ 600 ಕ್ಕೂ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳನ್ನು ಅಭಿನಂದಿಸುವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಯುವಕ ಮತ್ತು ಯುವತಿಯರು ಬಹಳ ಎಚ್ಚರಿಕೆಯಿಂದಿದ್ದು, ನಿಮ್ಮ ತಂದೆ-ತಾಯಿಗಳಿಗೆ ಒಳ್ಳೆಯ ಹೆಸರು ತನ್ನಿ. ಪ್ರತಿ ವರ್ಷವೂ ನಾನು ಬಡ ಕುಟುಂಬದ ಮಕ್ಕಳ ವಿದ್ಯಾಭ್ಯಾಸಕ್ಕಾಗಿ ವೈಯಕ್ತಿಕವಾಗಿ ಧನ ಸಹಾಯ ಮಾಡುತ್ತಾ ಬರುತ್ತಿದ್ದೇನೆ ಎಂದರು. ಕಾರ್ಯಕ್ರಮದ ಮುಖ್ಯ ಭಾಗವಾಗಿ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ 600 ಕ್ಕಿಂತ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳನ್ನು ಸನ್ಮಾನಿಸಿ, ಅಭಿನಂದಿಸಲಾಯಿತು.ಕಾರ್ಯಕ್ರಮದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ಸೈಯದ್ ಮೋಸಿನ್, ಯುವಜನ ಕ್ರೀಡಾಧಿಕಾರಿ ಮಹಾಂತೇಶ್, ಇಸಿಓ ಶಶಿಧರ್, ಶಾಲಾ ಅಭಿವೃದ್ಧಿ ಸಮಿತಿ ಅಧ್ಯಕ್ಷ ಅಬ್ದುಲ್ ಪಾಷಾ, ಸರ್ಕಾರಿ ಪದವಿ ಪೂರ್ವ ಕಾಲೇಜು ಪ್ರಾಂಶುಪಾಲ ಗುರುಮೂರ್ತಿ, ಪ್ರೌಢಶಾಲಾ ವಿಭಾಗದ ಪ್ರಾಂಶುಪಾಲ ನಾಗೇಂದ್ರಪ್ಪ, ಎಸ್.ಎಸ್.ಎಲ್.ಸಿ ನೋಡಲ್ ಅಧಿಕಾರಿ ಕೆಂಚಪ್ಪ, ಕರ್ನಾಟಕ ರಾಜ್ಯ ನೌಕರರ ಸಂಘದ ಕಾರ್ಯದರ್ಶಿ ದಿವಾಕರ್, ಹೊಸದುರ್ಗ ತಾಲೂಕು ನೌಕರರ ಸಂಘದ ಮಾಜಿ ಅಧ್ಯಕ್ಷ ಶಾಂತಪ್ಪ, ಮುಖಂಡರಾದ ಆಗ್ರೋ ಶಿವಣ್ಣ, ದೀಪಿಕಾ ಸತೀಶ್ ಮತ್ತು ಮಹಮದ್ ಇಸ್ಮಾಯಿಲ್ ಸೇರಿದಂತೆ ಶಿಕ್ಷಕರು ಮತ್ತು ನೂರಾರು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.


## ಮರಣಹೊಂದಿದ ರಾಸುಗಳ ಮಾಲೀಕರಿಗೆ ಪರಿಹಾರದ ಚೆಕ್ ವಿತರಣೆ



» **ಚಳ್ಳಕೆರೆ**

ಶಿವಮೊಗ್ಗ ಹಾಲು ಒಕ್ಕೂಟ ವ್ಯಾಪ್ತಿಯ ಹಿರಿಯೂರು, ಮೊಳಕಾಲ್ಮೂರು ಮತ್ತು ಚಳ್ಳಕೆರೆ ತಾಲ್ಲೂಕುಗಳ ಫಲಾನುಭವಿಗಳಿಗೆ ಶಿವಮೊಗ್ಗ ಹಾಲುಒಕ್ಕೂಟ ಕಲ್ಯಾಣ ಟ್ರಸ್ಟ್ ವತಿಯಿಂದ ಪರಿಹಾರದ ಚೆಕ್‌ನ್ನು ಜಿಲ್ಲಾನಿರ್ದೇಶಕ ಬಿ.ಸಿ.ಸಂಜೀವಮೂರ್ತಿ ಉಪಕಚೇರಿಯ ಕುರಿಯನ್ ಸಭಾಂಗಣದಲ್ಲಿ ವಿತರಿಸಿದರು. ಒಕ್ಕೂಟದ ವತಿಯಿಂದ ಮರಣಹೊಂದಿದ ರಾಸುಗಳ ಮಾಲೀಕರಿಗೆ ಪರಿಹಾರದ ಚೆಕನ್ನು ಪ್ರತಿವರ್ಷ ನೀಡಲಾಗುತ್ತಿದೆ. ಪ್ರಸ್ತುತ ಈ ಮೂರು ತಾಲ್ಲೂಕುಗಳ ವ್ಯಾಪ್ತಿಯಲ್ಲಿ ಒಟ್ಟು 5.40ಲಕ್ಷ ಪರಿಹಾರದ ಚೆಕನ್ನು ಮರಣಹೊಂದಿದ ರಾಸುಗಳ ಮಾಲೀಕರಿಗೆ ವಿತರಣೆ ಮಾಡಲಾಗಿದೆ. ಮಾಲೀಕರು ಅದೇ ಹಣವನ್ನು ಮತ್ತೆ ರಾಸುಗಳನ್ನು ಖರೀದಿಸಿ ಹಾಲುಉತ್ಪಾದಿಸುವ ಕಾರ್ಯವನ್ನು ಕೈಗೊಳ್ಳಬೇಕಿದೆ. ಶಿವಮೊಗ್ಗ ಹಾಲು ಒಕ್ಕೂಟದ ಪ್ರಗತಿಗೆ ಎಲ್ಲರೂ ಕೈಜೋಡಿಸಬೇಕೆಂದರು. ಕೆಎಂಎಫ್ ವಿಭಾಗಾಧಿಕಾರಿ ಎಂ.ಪುಟ್ಟರಾಜು, ವಿಸ್ತಾರಣಾಧಿಕಾರಿ ಎಸ್.ನಯಾಜ್‌ಬೇಗ್, ಮಾರ್ಕೆಂಟಿಗ್ ಅಧಿಕಾರಿ ಇರ್ಫಾನ್, ಮೇಲ್ವಿಚಾರಕ ತನ್ವೀರ್, ಪಶುವೈದ್ಯಾಧಿಕಾರಿ ಡಾ.ನರೇಶ್, ರಂಗನಾಥ, ಸಂತೋಷ್, ಸುರೇಶ್‌ಬಾಬು ಮುಂತಾದವರು ಉಪಸ್ಥಿತರಿದ್ದರು.

# ಎಷ್ಟು ಸಮಯ ಯಾವ ಸ್ಥಳದಲ್ಲಿ ವ್ಯಯಿಸಬೇಕು ಎಂಬ ಒಂದು ಚಿಂತನೆ......



ಆಸ್ಪತ್ರೆಗಳಲ್ಲಿ ಕಳೆಯುವ ದಿನಗಳು ಸಾಮಾನ್ಯವಾಗಿ ನೋವನ್ನು ಉಂಟುಮಾಡುತ್ತದೆ,

ಆಟದ ಮೈದಾನದಲ್ಲಿ ಕಳೆಯುವ ದಿನಗಳು ಸಾಮಾನ್ಯವಾಗಿ ನಲಿವನ್ನು ಕೊಡುತ್ತದೆ......

ಪೋಲೀಸ್ ಸ್ಟೇಷನ್, ಜೈಲು, ನ್ಯಾಯಾಲಯಗಳಲ್ಲಿ ಸವೆಸುವ ಸಮಯ ಯಾವಾಗಲೂ ಕಹಿ ನೆನಪುಗಳನ್ನು ಉಳಿಸುತ್ತದೆ.

ಗ್ರಂಥಾಲಯದಲ್ಲಿ ಸವೆಸುವ ಸಮಯ ಯಾವಾಗಲೂ ಜ್ಞಾನವನ್ನು ವೃದ್ಧಿಸುತ್ತದೆ.....

ಸಾವು, ಸ್ಮಶಾನ, ತಿಥಿಗಳಲ್ಲಿ ಭಾಗವಹಿಸಿದಾಗ ಹೃದಯ ಭಾರವಾಗುತ್ತದೆ.

ಮದುವೆ, ನಾಮಕರಣ, ಗೃಹ ಪ್ರವೇಶ ಕಾರ್ಯಕ್ರಮಗಳಲ್ಲಿ ಭಾಗವಹಿಸಿದಾಗ ಮನಸ್ಸು ಪ್ರಫುಲ್ಲಗೊಳ್ಳುತ್ತದೆ......

ಸಿನಿಮಾ, ನಾಟಕ, ಸರ್ಕಸ್ ಮುಂತಾದ ಸ್ಥಳಗಳು ಭಾವನೆಗಳನ್ನು ಕೆರಳಿಸುತ್ತವೆ,

ದೇವ ಮಂದಿರ ಮಠ ಮಾನ್ಯಗಳು ಭಾವನೆಗಳನ್ನು ನಿಯಂತ್ರಿಸುತ್ತವೆ......

ಐತಿಹಾಸಿಕ ಮತ್ತು ಪೌರಾಣಿಕ ಘಟನೆಗಳು ಕುತೂಹಲ ಮೂಡಿಸುತ್ತದೆ,

ಪ್ರಸ್ತುತ ರಾಜಕೀಯ ಮತ್ತು ಹಿಂಸಾತ್ಮಕ



ಘಟನೆಗಳು ಅಸಹ್ಯ ಮತ್ತು ಬೇಸರ ಮೂಡಿಸುತ್ತದೆ.....

ಪ್ರಕೃತಿಯೊಂದಿಗಿನ ಒಡನಾಟ ಜೀವನೋತ್ಸಾಹ ಹೆಚ್ಚಿಸುತ್ತದೆ.

ಆಧುನಿಕ ತಂತ್ರಜ್ಞಾನದ ಒಡನಾಟ ಜೀವನದ ಬಗ್ಗೆ ಜಿಗುಪ್ಸೆ ಹೆಚ್ಚಿಸುತ್ತದೆ......

ಪ್ರಶ್ನಿಸುವ ಮನೋಭಾವ ಮನಸ್ಸನ್ನು ವಿಶಾಲಗೊಳಿಸಿ ಸದಾ ಜಾಗೃತವಾಗಿಟ್ಟಿರುತ್ತದೆ.

ಪ್ರಶ್ನಿಸದೆ ಒಪ್ಪಿಕೊಳ್ಳುವ ಮನೋಭಾವ ಮನಸ್ಸನ್ನು ಸಂಕುಚಿತಗೊಳಿಸಿ ಅರಿವಿನ ಮಟ್ಟವನ್ನು ಕುಗ್ಗಿಸುತ್ತದೆ......

ದ್ವೇಷ, ಅಸೂಯೆ, ಅಹಂಕಾರ, ಪ್ರತಿಕಾರಗಳು ಸಂಬಂಧಗಳನ್ನು ನಾಶಪಡಿಸುತ್ತದೆ.

ಪ್ರೀತಿ, ಸಹಕಾರ, ತ್ಯಾಗ, ತಾಳ್ಮೆ ಸಂಬಂಧಗಳನ್ನು ಬೆಳೆಸುತ್ತವೆ......

ಈ ಎಲ್ಲಾ ಆಯ್ಕೆಗಳು ಬಹುತೇಕ ನಮ್ಮ ನಿಯಂತ್ರಣಕ್ಕೆ ಒಳಪಟ್ಟಿರುತ್ತದೆ.

ಅನಿವಾರ್ಯತೆ ಹೊರತುಪಡಿಸಿ ನಾವು ಯಾವುದನ್ನು ಎಷ್ಟು ಪ್ರಮಾಣದಲ್ಲಿ ಉಪಯೋಗಿಸಿಕೊಳ್ಳುತ್ತೇವೆ ಎಂಬುದರ ಮೇಲೆ ಬದುಕಿನ ಘನತೆ ನಿರ್ಧರಿಸಲ್ಪಡುತ್ತದೆ......

ಆಯ್ಕೆಗೆ ಮುನ್ನ ದಯವಿಟ್ಟು ಯೋಚಿಸಿ......

ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ,

ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ,

ಮನಗಳಲ್ಲಿ, ಮನೆಗಳಲ್ಲಿ, ಮತಗಳಲ್ಲಿ, ಪರಿವರ್ತನೆಗಾಗಿ,

ಮನಸ್ಸುಗಳ ಅಂತರಂಗದ ಚಳವಳಿ,



» **ಲೇಖನ**
**ವಿವೇಕಾನಂದ. ಹೆಚ್.ಕೆ.**
**9844013068**

# ಗಣತಿಯಲ್ಲಿ ಕಡ್ಡಾಯವಾಗಿ ಲಂಬಾಣಿ ಎಂದು ಬರೆಸಿ

» **ಚಿತ್ರದುರ್ಗ**

ರಾಜ್ಯ ಸರ್ಕಾರ ಆರಂಭಿಸಿರುವ ಒಳ ಮೀಸಲಾತಿ ಗಣತಿಗೆ ಅಧಿಕಾರಿಗಳು ತಾಂಡಾಗಳಿಗೆ ಭೇಟಿ ನೀಡುತ್ತಿದ್ದು, ಬಿಳಿ ಹಾಳೆ ಮೇಲೆ ದತ್ತಾಂಶಗಳನ್ನು ಪಡೆದುಕೊಳ್ಳುತ್ತಿದ್ದಾರೆ. ಮೊಬೈಲ್ ಆಪ್ ಮೂಲಕ ಗಣತಿಯಾಗಬೇಕೆಂದು ಬಂಜಾರ(ಲಂಬಾಣಿ) ಸಮಾಜದ ಜಿಲ್ಲಾಧ್ಯಕ್ಷ ಎಂ.ಸತೀಶ್‌ಕುಮಾರ್ ಒತ್ತಾಯಿಸಿದ್ದಾರೆ.

ಪ್ರವಾಸಿ ಮಂದಿರದಲ್ಲಿ ಬುಧವಾರ ಬಂಜಾರ(ಲಂಬಾಣಿ) ಜನಾಂಗದ ಸಭೆ ನಡೆಸಿ ಮಾತನಾಡಿದರು.

ಒಳ ಮೀಸಲಾತಿ ಸಮೀಕ್ಷೆಗೆ ಆಯೋಗವನ್ನು ಸರ್ಕಾರ ಕಳಿಸಿರುವುದು ಸ್ವಾಗತಾರ್ಹ. ಆದರೆ ಸರ್ವರ್ ಇಲ್ಲ ಎನ್ನುವ ನೆಪ ಹೇಳಿ ಕಾಗದದ ಮೇಲೆ ಮಾಹಿತಿ ಪಡೆದುಕೊಳ್ಳುವುದು ವೈಜ್ಞಾನಿಕ ಕ್ರಮವಲ್ಲ. ತಾಂಡಾಗಳಲ್ಲಿ ಲಂಬಾಣಿ ಜನಾಂಗ



ಎಚ್ಚೆತ್ತುಕೊಂಡು ಮೊಬೈಲ್ ಆಪ್ ಮೂಲಕವೇ ಗಣತಿಯಾಬೇಕೆಂದು ಪಟ್ಟು ಹಿಡಿಯಬೇಕೆಂದು ಜಾಗೃತಿಗೊಳಿಸಿದರು.

ತಾಂಡಾಗಳಲ್ಲಿ ಗಣತಿಗೆ ಹೋಗುವ ಅಧಿಕಾರಿಗಳು ದಿಕ್ಕುತಪ್ಪಿಸುತ್ತಿದ್ದಾರೆಂದು ಸಾಕಷ್ಟು ಕರೆಗಳು ಬರುತ್ತಿವೆ. ಸರ್ವರ್ ಇಲ್ಲ ಎಂದು ಯಾವುದೇಕಾರಣಕ್ಕೂಹೇಳುವಂತಿಲ್ಲ.ಕೂಲಿಗಾಗಿ ವಲಸೆ ಹೋಗಿರುವ ಬಂಜಾರ ಜನಾಂಗ ತಮ್ಮ ತಮ್ಮ ತಾಂಡಾಗಳಿಗೆ ಹಿಂದಿರುಗಿ ಒಳ ಮೀಸಲಾತಿ ಜಾತಿ ಗಣತಿಯಲ್ಲಿ ಕಡ್ಡಾಯವಾಗಿ ಪಾಲ್ಗೊಂಡು ನಿಖರವಾದ ಅಂಕಿ ಅಂಶಗಳನ್ನು ನೀಡುವಂತೆ ಎಂ.ಸತೀಶ್‌ಕುಮಾರ್ ವಿನಂತಿಸಿದರು.

ಕದರೇಶ್, ಸಂತೋಷ್, ಗಿರೀಶ್, ಓಂಕಾರ್‌ನಾಯ್ಕ, ಗ್ರಾಮ ಪಂಚಾಯಿತಿ ಸದಸ್ಯ ಶ್ರೀನಿವಾಸ್, ಕೂಬ್ಯಾನಾಯ್ಕ, ಪ್ರದೀಪ್ ಇವರುಗಳು ಸಭೆಯಲ್ಲಿ ಭಾಗವಹಿಸಿದ್ದರು.

# ಅಲೆಮಾರಿ, ಅರೆಅಲೆಮಾರಿಗಳ ನೈಜತೆಯನ್ನು ಮುಚ್ಚಿಡಬಾರದು




» **ಚಿತ್ರದುರ್ಗ**

ಒಳ ಮೀಸಲಾತಿಗಾಗಿ ಪರಿಶಿಷ್ಟ ಜಾತಿಗಳ ಮನೆ ಮನೆ ಗಣತಿ ಆರಂಭಿಸಿರುವ ರಾಜ್ಯ ಸರ್ಕಾರ ಅಲೆಮಾರಿ, ಅರೆಅಲೆಮಾರಿ ಸಮುದಾಯಗಳನ್ನು ಗಮನದಲ್ಲಿಟ್ಟುಕೊಂಡು ಪೂರಕ ಪ್ರಶ್ನಾವಳಿಗಳನ್ನು ಸಿದ್ದಪಡಿಸಬೇಕೆಂದು ವೈಜ್ಞಾನಿಕ ಒಳ ಮೀಸಲಾತಿ ಅನುಷ್ಠಾನ ಹೋರಾಟ ಸಮಿತಿ ಅಖಿಲ ಕರ್ನಾಟಕ ಕುಳುವ ಮಹಾ ಸಂಘದ ರಾಜ್ಯ ಜಂಟಿ ಕಾರ್ಯದರ್ಶಿ ವಿ.ಕಿರಣ್‌ಕುಮಾರ್ ಕೊತ್ತಗೆರೆ ಒತ್ತಾಯಿಸಿದರು.

ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಮೇ.5 ರಿಂದ ಆರಂಭಗೊಂಡಿರುವ ಗಣತಿ 17 ರವರೆಗೆ ನಡೆಯಲಿದೆ.

# ಉಗ್ರರ ತಂಗುದಾಣಗಳನ್ನು ಪತ್ತೆ ಹೆಚ್ಚಿ ಸರ್ವನಾಶ ಮಾಡಿ

» **ಚಿತ್ರದುರ್ಗ**

ಜಮ್ಮು-ಕಾಶ್ಮೀರದಲ್ಲಿ ಉಗ್ರಗಾಮಿಗಳು ಕಳೆದ ತಿಂಗಳು ಗುಂಡಿನ ದಾಳಿ ನಡೆಸಿ 26 ಅಮಾಯಕರುಗಳನ್ನು ಹತ್ಯೆಗೈದಿರುವುದು ಅತ್ಯಂತ ಖಂಡನಾರ್ಹ. ಮಾನವ ಕುಲಕ್ಕೆ ಕಳಂಕ. ಭಯೋತ್ಪಾದಕರು ಎಲ್ಲಿಯೇ ಅಡಗಿ ಕುಳಿತಿರಲಿ ಪತ್ತೆ ಹಚ್ಚಿ ಬಗ್ಗು ಬಡಿಯುವಂತೆ ಎದ್ದೇಳು ಕರ್ನಾಟಕ ಸಂಘಟನೆಯ ಕೇಂದ್ರ ವರ್ಕಿಂಗ್ ಕಮಿಟಿ ಸದಸ್ಯ ಜೆ.ಯಾದವರೆಡ್ಡಿ ಕೇಂದ್ರ ಸರ್ಕಾರವನ್ನು ಆಗ್ರಹಿಸಿದರು.

ಪ್ರವಾಸಿ ಮಂದಿರದಲ್ಲಿ ಎದ್ದೇಳು ಕರ್ನಾಟಕ ಸಂಘಟನೆಯ ಪದಾಧಿಕಾರಿಗಳೊಂದಿಗೆ ಸಭೆ ನಡೆಸಿ ಮಾತನಾಡಿದ ಅವರು ಕೇಂದ್ರ ಸರ್ಕಾರದ ಕ್ರಮಕ್ಕೆ ಎದ್ದೇಳು ಕರ್ನಾಟಕ ಸಂಪೂರ್ಣ ಬೆಂಬಲವಿದೆ. ಅಂತಹ ಅಮಾನವೀಯ ಘಟನೆ ಮತ್ತೆ ಮರುಕಳಿಸಬಾರದೆಂದರೆ ಉಗ್ರರ ತಂಗುದಾಣಗಳನ್ನು ಪತ್ತೆ ಹೆಚ್ಚಿ



ಸರ್ವನಾಶ ಮಾಡಬೇಕು. ಭಯೋತ್ಪಾದಕರಲ್ಲಿ ಕೊಲ್ಲುವ ಮನಸ್ಥಿತಿ ಬಿಟ್ಟರೆ ಮಾನವೀಯತೆ ಅಂತಃಕರಣವಿರುವುದಿಲ್ಲ. ಮನಷ್ಯತ್ವ ಕಳೆದುಕೊಂಡಿರುತ್ತಾರೆ. ಹಾಗಾಗಿ ಪಹಲ್ಗಾಮ್‌ನ ದಾಳಿಗೆ ಧರ್ಮದ ಲೇಪನ ಬೇಡ. ಜಮ್ಮು-ಕಾಶ್ಮೀರದ ಸ್ಥಳೀಯ ಮುಸಲ್ಮಾನರು ಜೀವದ ಹಂಗು ತೊರೆದು ಉಗ್ರರಿಂದ ಪ್ರವಾಸಿಗರನ್ನು ಕಾಪಾಡುವ ಪ್ರಯತ್ನ ನಡೆಸಿ ಕೆಲವರನ್ನು ಸುರಕ್ಷಿತ ಸ್ಥಳಗಳಿಗೆ ತಲುಪಿಸಿ ಊಟ, ವಸತಿ ನೀಡಿ ಮಾನವೀಯತೆ ಮೆರೆದಿದ್ದನ್ನು ಹತ್ಯೆಗೊಳಗಾದ ಕುಟುಂಬದವರು ಸ್ವತಃ ಮಾಧ್ಯಮಗಳ ಮುಂದೆ ಅಳಲು ತೋಡಿಕೊಂಡಿದ್ದಾರೆ. ಉಗ್ರರು ಗುಂಡು ಹಾರಿಸುವುದನ್ನು ತಡೆಯಲು ಹೋಗಿ ಆದಿಲ್‌ಷಾ ಹುತಾತ್ಮನಾಗಿದ್ದಾನೆ. ಪರಿಸ್ಥಿತಿ ಹೀಗಿರುವಾಗ ಸ್ಥಳೀಯ ರಾಜಕಾರಣಿಗಳುಮುಸಲ್ಮಾನರ ಬಗ್ಗೆ ಅತ್ಯಂತ ಪೂರ್ವಾಗ್ರಹ ಪೀಡಿತರಾಗಿ ಮಾತನಾಡಿ ಕೋಮು ಭಾವನೆ ಕೆರಳಿಸುವುದು ಸರಿಯಲ್ಲ ಎನ್ನುವ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

ಸಾವಿರಾರು ವರ್ಷಗಳಿಂದ ಹಿಂದೂ-ಮುಸಲ್ಮಾನರು ಸಹೋದರರಂತೆ ಐಕ್ಯತೆಯಿಂದಿದ್ದಾರೆ. ಕೆಲವು ಪಟ್ಟಭದ್ರ ಧಾರ್ಮಿಕ ಹಿತಾಸಕ್ತಿಗಳು ಏನಾದರೂ ಕಿತಾಪತಿ ಮಾಡಿ ಶಾಂತಿ ಕದಡುವ ಹೇಳಿಕೆ ನೀಡುತ್ತಿರುವುದನ್ನು ದೇಶದ ಭವಿಷ್ಯದ ದೃಷ್ಟಿಯಿಂದ ನಿಲ್ಲಿಸಬೇಕು. ನಮ್ಮ ದೇಶದಲ್ಲಿ ಎಲ್ಲಾ ಧರ್ಮದ ಸೈನಿಕರುಗಳಿದ್ದಾರೆ. ಸಮಗ್ರತೆ ಪ್ರಶ್ನೆ ಬಂದಾಗ ಧರ್ಮ ಜಾತಿ ಅಡ್ಡ ಬರಬಾರದು. ಕೋಮು ಸಾಮರಸ್ಯ ಕಾಪಾಡಿ ಸಂರಕ್ಷಿಸುವ ನಿಟ್ಟಿನಲ್ಲಿ ದ್ವೇಷ ಅಳಿಸಿ ಪ್ರೀತಿ ಅರಳಿಸಿ ಎಂಬುದು ಎದ್ದೇಳು ಕರ್ನಾಟಕದಧ್ಯೇಯ ವಾಕ್ಯ. ರಾಜ್ಯದ ಎರಡು ಜಿಲ್ಲೆಗಳು ಇಂತಹ ಪ್ರಯೋಗಕ್ಕೆ ಒಳಪಡುತ್ತಿವೆ. ಹತ್ಯೆಯಾಗಿರುವುದು ಕೇವಲ ಪ್ರವಾಸಿಗರಲ್ಲ. ಮನುಷ್ಯತ್ವ ಎನ್ನುವುದನ್ನು ಟೀಕಿಸುವವರು ಮೊದಲು ಅರ್ಥಮಾಡಿಕೊಳ್ಳಬೇಕೆಂದು ಜೆ.ಯಾದವರೆಡ್ಡಿ ಮನವಿ ಮಾಡಿದರು.

ಎದ್ದೇಳು ಕರ್ನಾಟಕದ ಶಿವಕುಮಾರ್, ಟಿ.ಶಫಿವುಲ್ಲಾ, ಪ್ರಜಾಶಕ್ತಿ ಬೋರಯ್ಯ, ಪುರುಷೋತ್ತಮ, ಬೀಬಿಜಾನ್, ತಿಪ್ಪೇಸ್ವಾಮಿ ಎಸ್.ಟಿ. ಅರಣ್ಯ ಇವರುಗಳು ಸಭೆಯಲ್ಲಿ ಹಾಜರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T